# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 870 |
| ಸದಸ್ಯರ ಹೆಸರು | ಶ್ರೀ ಕೇಶವ ಪ್ರಸಾದ್ ಎಸ್ |
| ಉತ್ತರಿಸುವ ದಿನಾಂಕ | 24-07-2024 |
| ಉತ್ತರಿಸುವವರು | ಸಾರಿಗೆ ಮತ್ತು ಮುಜರಾಯಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಾಶಿ ತೀರ್ಥಯಾತ್ರೆ ಯೋಜನೆ ಪ್ರಾರಂಭವಾದ ವರ್ಷ ಯಾವುದು; (ಸಂಪೂರ್ಣ ಮಾಹಿತಿ ನೀಡುವುದು) | ಸರ್ಕಾರದ ಆದೇಶ ಸಂಖ್ಯೆ: RD/174/MABI/2022, ದಿನಾಂಕ:27.06.2022ರನ್ವಯ 2022ನೇ ಸಾಲಿನಿಂದ ಕರ್ನಾಟಕ ರಾಜ್ಯದಿಂದ ಕಾಶಿ ಯಾತ್ರೆ ಯೋಜನೆ ಪ್ರಾರಂಭವಾಗಿರುತ್ತದೆ.<br><br>2022-23ನೇ ಆಯವ್ಯಯ ಭಾಷಣ ಕಂಡಿಕೆ-366 ರಂತೆ ರಾಜ್ಯದಿಂದ ಕಾಶಿ ಯಾತ್ರೆಯನ್ನು ಕೈಗೊಳ್ಳುವ 30,000 ಯಾತ್ರಾರ್ಥಿಗಳಿಗೆ ತಲಾ ರೂ.5000/-ಗಳ ಸಹಾಯಧನವನ್ನು ನೀಡಲು ಲೆಕ್ಕ ಶೀರ್ಷಿಕೆ 2250-00-103-5-08-100 Assistance to Manasa Sarovara Priligrims ಅಡಿಯಲ್ಲಿ ಒದಗಿಸಿರುವ ರೂ.700.00 ಲಕ್ಷಗಳನ್ನು ಆಯುಕ್ತರು ಧಾರ್ಮಿಕ ದತ್ತಿ ಇಲಾಖೆ ಇವರಿಗೆ ಬಿಡುಗಡೆಗೊಳಿಸಲು ಮಂಜೂರಾತಿ ನೀಡಿ ಯೋಜನೆಯನ್ನು ಅನುಷ್ಠಾನಗೊಳಿಸಲು ಆದೇಶಿಸಲಾಗಿರುತ್ತದೆ. ಮಾರ್ಗಸೂಚಿಯನ್ನು **ಅನುಬಂಧ-1** ದಲ್ಲಿ ಒದಗಿಸಿದೆ.<br><br>2022-23ನೇ ಸಾಲಿನಲ್ಲಿ ಪ್ರಸ್ತಾಪಿತ ಲೆಕ್ಕ ಶೀರ್ಷಿಕೆಯಡಿ ಕರ್ನಾಟಕದಿಂದ ಕೈಲಾಸ ಮಾನಸ ಸರೋವರ ಯಾತ್ರೆ, ಚಾರ್‌ಧಾಮ್ ಯಾತ್ರೆ, ಕಾಶಿ ಯಾತ್ರೆ ಹಾಗೂ ಭಾರತ್ ಗೌರವ್ ಕಾಶಿ-ಗಯಾ ದರ್ಶನ ಯೋಜನೆಯಡಿ ಪ್ರಯಾಣಿಸುವ - ಯಾತ್ರಾರ್ಥಿಗಳಿಗೆ ಸರ್ಕಾರದಿಂದ ಸಹಾಯಧನವಾಗಿ ರೂ.2000.00ಲಕ್ಷಗಳ ಅನುದಾನವನ್ನು ಮಂಜೂರು ಮಾಡಲಾಗಿರುತ್ತದೆ. ಕೈಲಾಸ ಮಾನಸ ಸರೋವರ ಹಾಗೂ ಚಾರ್ ಧಾಮ್ ಈ ಯೋಜನೆಗಳಡಿ ಯಾತ್ರಿಕರಿಂದ ಹೆಚ್ಚಿನ ಅರ್ಜಿಗಳು ಸ್ವೀಕೃತವಾಗದೇ ಇದ್ದುದರಿಂದ, ಕಾಶಿ ಯಾತ್ರೆ ಕೈಗೊಂಡ ಯಾತ್ರಾರ್ಥಿಗಳಿಗೆ ಅದೇ ಲೆಕ್ಕ ಶೀರ್ಷಿಕೆಯಿಂದ ಭರಿಸಿ ಪಾವತಿಸಲಾಗಿರುತ್ತದೆ. |
| ಆ) | ಕಾಶಿಯಾತ್ರೆಗೆ ಆಯ್ಕೆಗೊಳ್ಳಲು ಇರುವ ಸರ್ಕಾರದ ಮಾನದಂಡಗಳೇನು; (ಸಂಪೂರ್ಣ ವಿವರ ನೀಡುವುದು) | ಸರ್ಕಾರದ ಆದೇಶ ಸಂಖ್ಯೆ: ಕಂಇ 166 ಮುಅಬಿ 2022 ದಿನಾಂಕ:21.02.2024 ರಲ್ಲಿ ಕರ್ನಾಟಕ ರಾಜ್ಯದಿಂದ ಕಾಶಿ ಯಾತ್ರೆಯನ್ನು ಕೈಗೊಳ್ಳುವ ಯಾತ್ರಾರ್ಥಿಗಳಿಗೆ ಸರ್ಕಾರದ ವತಿಯಿಂದ ಸಹಾಯ ಧನವನ್ನು ಪಾವತಿಸಲು ಅನುಸರಿಸಬೇಕಾದ ಮಾರ್ಗಸೂಚಿಗಳನ್ನು ಗುರುತಿಸಲಾಗಿದೆ. (ವಿವರಗಳನ್ನು **ಅನುಬಂಧ-2**ದಲ್ಲಿ ಒದಗಿಸಿದೆ) |

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಇ)</td><td>ಕಳೆದ ಎರಡು ವರ್ಷದಿಂದ ಕಾಶಿಯಾತ್ರೆಗೆ ಎಷ್ಟು ಜನರನ್ನು ಆಯ್ಕೆ ಮಾಡಿ ಕಳುಹಿಸಲಾಗಿದೆ; ಪ್ರತಿಯೊಬ್ಬ ಫಲಾನುಭವಿಗೆ ಎಷ್ಟು ಸಹಾಯಧನ ನೀಡಲಾಗುತ್ತಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)</td><td>
ಕಳೆದ ಎರಡು ವರ್ಷದಿಂದ ಕಾಶಿಯಾತ್ರೆಯನ್ನು ಕೈಗೊಂಡ ಫಲಾನುಭವಿಗಳ ಒಟ್ಟು ಸಂಖ್ಯೆ: 18,231 ಆಗಿರುತ್ತದೆ.
ಕರ್ನಾಟಕ ರಾಜ್ಯದಿಂದ ಕಾಶಿಯಾತ್ರೆ ಕೈಗೊಂಡು ಸರ್ಕಾರದ ಮಾರ್ಗಸೂಚಿಯನ್ವಯ ಸಂಬಂಧಿಸಿದ ಮಾಹಿತಿ/ದಾಖಲೆಗಳೊಂದಿಗೆ ನಿಯಮಾನುಸಾರ ಅರ್ಜಿ ಸಲ್ಲಿಸುವ ಯಾತ್ರಾರ್ಥಿಗಳಿಗೆ ತಲಾ ರೂ.5000/-ಗಳ ಸಹಾಯಾನುದಾನವನ್ನು ಮಂಜೂರು ಮಾಡಲಾಗುತ್ತಿದೆ. ಕಳೆದ 2 ಸಾಲುಗಳಲ್ಲಿ ಸರ್ಕಾರದ ಸಹಾಯಧನ ಪಡೆದ ಯಾತ್ರಾರ್ಥಿಗಳ ವಿವರ ಈ ಕೆಳಕಂಡಂತಿದೆ.
<table>
<tr><th>ಸಾಲು</th><th>ಫಲಾನುಭವಿಗಳ ಸಂಖ್ಯೆ</th></tr>
<tr><td>2022-23</td><td>17072</td></tr>
<tr><td>2023-24</td><td>1159</td></tr>
</table>
ಆರ್ಥಿಕ ಇಲಾಖೆಯ ಸಹಮತಿ ಮೇರೆಗೆ ಸರ್ಕಾರದ ಪತ್ರ ಸಂಖ್ಯೆ: ಕಂಇ 174 ಮುಅಬಿ 2022 ದಿನಾಂಕ: 27.03.2024 ರನ್ವಯ 2022-23ನೇ ಸಾಲಿನ 6116 ಕಾಶಿ ಯಾತ್ರಾರ್ಥಿಗಳಿಗೆ 2023-24ನೇ ಸಾಲಿನ ಅನುದಾನದಲ್ಲಿ ಸರ್ಕಾರದ ಸಹಾಯಧನವನ್ನು ಪಾವತಿಸಲಾಗಿರುತ್ತದೆ.
ಭಾರತ್ ಗೌರವ್ ಕಾಶಿಯಾತ್ರೆಯನ್ನು ಈ ಸರ್ಕಾರವು ಅಸ್ತಿತ್ವಕ್ಕೆ ಬಂದ ನಂತರ ಗಯಾ ಕ್ಷೇತ್ರಕ್ಕೆ ವಿಸ್ತರಿಸಿದ್ದು, ಇದರಿಂದ ಪ್ರಯಾಣ ದರವು ತಲಾ ರೂ. 22,500/- ಆಗಲಿದ್ದು, ಯಾತ್ರಾರ್ಥಿಗಳಿಗೆ ಆರ್ಥಿಕ ಹೊರೆ ಆಗಬಾರದೆಂಬ ದೃಷ್ಟಿಯಿಂದ, ಸಹಾಯದನ ಮೊತ್ತವನ್ನು ಹೆಚ್ಚಿಸಿದ್ದು, ಪ್ರತಿ ಯಾತ್ರಾರ್ಥಿಗಳಿಗೆ ರೂ. 17500/-ಗಳನ್ನು ಸರ್ಕಾರದಿಂದ ಭರಿಸಲಾಗುತ್ತದೆ. ಇದರಲ್ಲಿ ಈ ಕೆಳಕಂಡ ಶುಲ್ಕಗಳು ಒಳಗೊಂಡಿರುತ್ತವೆ.
<ol type="i">
<li>ರೈಲ್‌ನ ಶುಲ್ಕ,</li>
<li>ವೈದ್ಯಕೀಯ ವೆಚ್ಚ</li>
<li>ಸಾರಿಗೆ ವೆಚ್ಚ</li>
<li>ತಂಗಲು ಕೊಠಡಿ ವೆಚ್ಚ</li>
<li>ಊಟ ಮತ್ತು ಉಪಹಾರ ವೆಚ್ಚ ಹಾಗೂ</li>
<li>ಇತರೆ ವೆಚ್ಚಗಳು.</li>
</ol>
ಈ ಸರ್ಕಾರವು ಅಸ್ತಿತ್ವಕ್ಕೆ ಬಂದ ನಂತರ ಪ್ರತಿ ವರ್ಷ 1200 ಅರ್ಚಕರು ಹಾಗೂ ಅರ್ಚಕರ ಕುಟುಂಬದ 1200 ಸದಸ್ಯರು ಒಟ್ಟು 2400 ಜನರನ್ನು ಉಚಿತವಾಗಿ ಯಾತ್ರೆಗೆ ಕಳಹಿಸಲಾಗುತ್ತಿದೆ.
ಮಾರ್ಗಸೂಚಿಯನ್ವಯ ಫಲಾನುಭವಿಗಳ ಆಯ್ಕೆಯು online ಮೂಲಕ ಆಗುವುದರಿಂದ, ಜಿಲ್ಲಾವಾರು ಮಾಹಿತಿ ಲಭ್ಯವಿರುವುದಿಲ್ಲ.
</td></tr>
</table>

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| | | |
| ಈ) | ಕಳೆದ ಎರಡು ವರ್ಷದಿಂದ ಸರ್ಕಾರ ಈ ಕಾಶಿಯಾತ್ರೆಗೆ ಎಷ್ಟು ಅನುದಾನ ಮಂಜೂರು ಮಾಡಿದೆ; (ವಿವರವಾದ ಮಾಹಿತಿ ನೀಡುವುದು) | 1. 2022-23ನೇ ಸಾಲಿನಲ್ಲಿ ಆಯವ್ಯಯ ಭಾಷಣ ಕಂಡಿಕೆ-(366)ರಂತೆ ರಾಜ್ಯದಿಂದ ಕಾಶಿ ಯಾತ್ರೆಯನ್ನು ಕೈಗೊಳ್ಳುವ 30,000 ಯಾತ್ರಾರ್ಥಿಗಳಿಗೆ ತಲಾ ರೂ.5000/-ಗಳ ಸಹಾಯಧನವನ್ನು ನೀಡಲು ಲೆಕ್ಕ ಶೀರ್ಷಿಕೆ" 2250-00-103-5-08-100 Assistance to Manasa Sarovara Priligrims ಅಡಿಯಲ್ಲಿ ಒದಗಿಸಿರುವ ರೂ. 700 ಲಕ್ಷಗಳ ಅನುದಾನವನ್ನು ಮಂಜೂರು ಮಾಡಲಾಗಿರುತ್ತದೆ.<br><br>2. 2023-24ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ:2250-00-103-5-08-(100) ಇದರಡಿ ಕರ್ನಾಟಕ ರಾಜ್ಯದಿಂದ ಕೈಲಾಸ ಮಾನಸ ಸರೋವರ ಯಾತ್ರೆ) ಚಾರ್‌ಧಾಮ್ ಯಾತ್ರೆ, ಕಾಶಿ ಯಾತ್ರೆ ಹಾಗೂ ಭಾರತ್ ಗೌರವ್ ಕಾಶಿ-ಗಯಾ ದರ್ಶನ ಯೋಜನೆಯಡಿ ಪ್ರಯಾಣಿಸುವ ಯಾತ್ರಾರ್ಥಿಗಳಿಗೆ ಒಟ್ಟಾಗಿ ರೂ.2000.00 ಲಕ್ಷಗಳ ಅನುದಾನವನ್ನು ಮಂಜೂರು ಮಾಡಲಾಗಿರುತ್ತದೆ.<br><br>ಮೇಲಿನ ವಿವರದಂತೆ ಸರ್ಕಾರದ ಸಹಾಯಧನವನ್ನು ಅಗತ್ಯತೆಗೆ ಅನುಗುಣವಾಗಿ ವಿನಿಯೋಗಿಸಿಕೊಳ್ಳಲಾಗುತ್ತಿದೆ. (ಆದೇಶ ಪ್ರತಿಗಳನ್ನು **ಅನುಬಂಧ-3ರ**ಲ್ಲಿ ಒದಗಿಸಿದೆ.) |
| ಉ) | ಕಾಶಿಯಾತ್ರೆ ಕೈಗೊಂಡ ಕೆಲ ಫಲಾನುಭವಿಗಳಿಗೆ ಸರಿಯಾದ ಸಮಯದಲ್ಲಿ ಸಹಾಯಧನ ದೊರಕದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು? (ಮಾಹಿತಿ ನೀಡುವುದು) | ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br><br>ಕಾಶಿ ಯಾತ್ರೆ ಕೈಗೊಂಡ ಯಾತ್ರಾರ್ಥಿಗಳು ಸರ್ಕಾರದ ಮಾರ್ಗ ಸೂಚಿಯನ್ವಯ ಒದಗಿಸಬೇಕಾದ ಮಾಹಿತಿ /ದಾಖಲೆಗಳನ್ನು online ಮೂಲಕ ಸರಿಯಾಗಿ ಒದಗಿಸದೇ ಇರುವುದರಿಂದ/ ಆಧಾರ್ ಸೀಡಿಂಗ್ /ID Validation ಆಗದೇ ಇರುವ ಕಾರಣದಿಂದಾಗಿ ಸರ್ಕಾರದ ಸಹಾಯಧನವನ್ನು ಸರಿಯಾದ ಸಮಯಕ್ಕೆ ಒದಗಿಸಲು ಸಾಧ್ಯವಾಗಿರುವುದಿಲ್ಲ.<br><br>ಕಾಶಿ ಯಾತ್ರೆ ಕೈಗೊಂಡ ಯಾತ್ರಾರ್ಥಿಗಳು ಸರ್ಕಾರದ ಸಹಾಯಧನಕ್ಕಾಗಿ ಅರ್ಜಿ ಸಲ್ಲಿಸುವ ಸಂಧರ್ಭದಲ್ಲಿ ಅನುಸರಿಸಬೇಕಾದ ಕ್ರಮಗಳ ಕುರಿತು ವೆಬ್ ಪೋರ್ಟಲ್‌ನಲ್ಲಿ **(karnatakayatras.com)** ಸಂಪೂರ್ಣ ಮಾಹಿತಿಯನ್ನು ಯತ್ರಾರ್ಥಿಗಳ ಅನುಕೂಲಕ್ಕಾಗಿ ಒದಗಿಸಲಾಗಿರುತ್ತದೆ ಹಾಗೂ ಈ ರೀತಿಯಾಗಿ ತಾಂತ್ರಿಕ ತೊಂದರೆಗಳಿಂದ 2023-24ನೇ ಸಾಲಿನಲ್ಲಿ ಸರ್ಕಾರದ ಸಹಾಯಧನ ಪಾವತಿಯಾಗದೇ ಇರುವ ಯಾತ್ರಾರ್ಥಿಗಳಿಗೆ 2024-25ನೇ ಸಾಲಿನಲ್ಲಿ ಸರ್ಕಾರದ ಸಹಾಯಧನ ವಿತರಿಸಲು ಪರಿಶೀಲಿಸಲಾಗುತ್ತಿದೆ. |

ಸಂಖ್ಯೆ: ಕಂಇ 99 ಮುಸಪ್ರ 2024

ರಾಮಲಿಂಗಾರೆಡ್ಡಿ

ಸಾರಿಗೆ ಮತ್ತು ಮುಜರಾಯಿ ಸಚಿವರು

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- 2022-23ನೇ ಸಾಲಿನ ಆಯವ್ಯಯ ಭಾಷಣದಲ್ಲಿನ ಕಂಡಿಕೆ-366ರಲ್ಲಿನ ಘೋಷಣೆಯಂತೆ ರಾಜ್ಯದಿಂದ ಕಾಶಿ ಯಾತ್ರೆಯನ್ನು ಕೈಗೊಳ್ಳುವ ಯಾತ್ರಾರ್ಥಿಗಳಿಗೆ ಸಹಾಯಧನವನ್ನು ನೀಡುವ ಕುರಿತು.

ಓದಲಾಗಿದೆ:
1. 2021-22ನೇ ಸಾಲಿನ ಆಯವ್ಯಯ ಭಾಷಣದಲ್ಲಿನ ಕಂಡಿಕೆ 366.
2. ಸರ್ಕಾರದ ಆದೇಶ ಸಂಖ್ಯೆ:ಕಂಇ 174 ಮುಅಬಿ 2022, ದಿನಾಂಕ:11.04.2022.
3. ಪತ್ರ ಸಂಖ್ಯೆ:ಟಿಆರ್‌ಡಿಎಮ್ ಮಾನಸ ಸರೋವರ /ಸಿಆರ್/01/2021-22 ದಿನಾಂಕ:05.04.2022
4. ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 315 ವೆಚ್ಚ-7/2022, ದಿನಾಂಕ:07.04.2022/08.04.2022.

*****

ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮ ಸಂಖ್ಯೆ(1)ರಲ್ಲಿ 2022-23ನೇ ಆಯವ್ಯಯ ಭಾಷಣದ ಕಂಡಿಕೆ (366)ರಲ್ಲಿ ಈ ಕೆಳಕಂಡಂತೆ ಘೋಷಣೆ ಮಾಡಲಾಗಿದೆ.

> **"ರಾಜ್ಯದಿಂದ ಕಾಶಿ ಯಾತ್ರೆಯನ್ನು ಕೈಗೊಳ್ಳುವ 30,000 ಯಾತ್ರಾರ್ಥಿಗಳಿಗೆ ಸರ್ಕಾರದಿಂದ ತಲಾ 5000/-ರೂ.ಗಳ ಸಹಾಯ ಧನವನ್ನು ನೀಡಲಾಗುವುದು"**

ಮೇಲೆ ಓದಲಾದ ಕ್ರಮ ಸಂಖ್ಯೆ(2)ರಲ್ಲಿನ ಸರ್ಕಾರದ ಆದೇಶದಲ್ಲಿ 2022-23ನೇ ಸಾಲಿನ ಆಯವ್ಯಯ ಭಾಷಣದಲ್ಲಿನ ಕಂಡಿಕೆ-366ರಲ್ಲಿನ ಘೋಷಣೆಯಂತೆ ರಾಜ್ಯದಿಂದ ಕಾಶಿ ಯಾತ್ರೆಯನ್ನು ಕೈಗೊಳ್ಳುವ 30,000 ಯಾತ್ರಾರ್ಥಿಗಳಿಗೆ ಸರ್ಕಾರದಿಂದ ತಲಾ ರೂ.5000/-ರೂ.ಗಳ ಸಹಾಯ ಧನವನ್ನು ನೀಡಲು ತಾತ್ವಿಕ ಅನುಮೋದನೆ ನೀಡಿ ಆದೇಶಿಸಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(3)ರಲ್ಲಿನ ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ಇವರ ಪ್ರಸ್ತಾವನೆಯಲ್ಲಿ 2022-23ನೇ ಆಯವ್ಯಯ ಭಾಷಣ ಕಂಡಿಕೆ (366) ರಲ್ಲಿ " ರಾಜ್ಯದಿಂದ ಕಾಶಿ ಯಾತ್ರೆಯನ್ನು ಕೈಗೊಳ್ಳುವ 30000 ಯಾತ್ರಾರ್ಥಿಗಳಿಗೆ ಸರ್ಕಾರದಿಂದ ತಲಾ ರೂ.5000/-ರೂ.ಗಳ ಸಹಾಯ ಧನವನ್ನು ನೀಡಲಾಗುವುದು" ಎಂಬುದಾಗಿ ಘೋಷಿಸಿದ್ದು, ಆಯವ್ಯಯ ಘೋಷಣೆಯಂತೆ 30,000 ಯಾತ್ರಾರ್ಥಿಗಳಿಗೆ ಒಬ್ಬರಿಗೆ ರೂ.5000/-ಗಳಂತೆ ಒಟ್ಟು ರೂ.15.00 ಕೋಟಿಗಳ ಅನುದಾನ ಅವಶ್ಯಕವಿರುತ್ತದೆ. ಅದರಂತೆ ಕಾಶಿಯಾತ್ರೆ ಕೈಗೊಂಡು ಸಹಾಯಧನ ಕೋರಿ ಅರ್ಜಿ ಸಲ್ಲಿಸುವ ಅರ್ಹ ಯಾತ್ರಾರ್ಥಿಗಳಿಗೆ ತಲಾ ರೂ.5000/-ಗಳಂತೆ ಸಹಾಯಧನವನ್ನು ವಿತರಿಸುವ ಸಂಬಂಧ ಅನುಬಂಧದಲ್ಲಿನ ಅಂಶಗಳನ್ನೊಳಗೊಂಡಂತೆ ಸರ್ಕಾರದಿಂದ ಮಾರ್ಗಸೂಚಿಯನ್ನು ಹೊರಡಿಸುವ ಬಗ್ಗೆ ಹಾಗೂ ಆಯವ್ಯಯ ಕಂಡಿಕೆ-(366)ರಂತೆ 30,000 ಯಾತ್ರಾರ್ಥಿಗಳಿಗಾಗಿ ರೂ.15.00 ಕೋಟಿಗಳ ಅನುದಾನವನ್ನು ಮಂಜೂರು ಮಾಡಿ ಬಿಡುಗಡೆ ಮಾಡಲು ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ರವರು ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4)ರಲ್ಲಿನ ಆರ್ಥಿಕ ಇಲಾಖೆಯ ಟಿಪ್ಪಣಿಯಲ್ಲಿ ಪ್ರಸ್ತಾವನೆಗೆ ಸಂಬಂಧಿಸಿದಂತೆ ಆಯವ್ಯಯ ಭಾಷಣ ಕಂಡಿಕೆ-366ನ್ನು ಅನುಷ್ಠಾನಗೊಳಿಸಲು

. . . . . .2

ಲೆಕ್ಕ ಶೀರ್ಷಿಕೆ 2250-00-103-5-08-100 Assistance to Manasa sarovar Piligrims ಅಡಿಯಲ್ಲಿ ರೂ.700.00 ಲಕ್ಷಗಳನ್ನು ಒದಗಿಸಲಾಗಿದೆ. ಆಯವ್ಯಯದಲ್ಲಿ ಒದಗಿಸಿರುವ ಅನುದಾನದ ಮಿತಿಗೆ ಒಳಪಟ್ಟು ಈ ಘೋಷಣೆಯನ್ನು ಅನುಷ್ಠಾನಗೊಳಿಸಲು ಆರ್ಥಿಕ ಇಲಾಖೆಯು ಸಹಮತಿ ನೀಡಿರುತ್ತದೆ.

ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ಇವರ ಪ್ರಸ್ತಾವನೆಯನ್ನು ಮತ್ತು ಆರ್ಥಿಕ ಇಲಾಖೆಯ ಸಹಮತಿಯನ್ನಯ ಸರ್ಕಾರವು ಈ ಕೆಳಕಂಡಂತೆ ತೀರ್ಮಾನಿಸಿ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: RD/174/MABI /2022,</u>**
**<u>ಬೆಂಗಳೂರು, ದಿನಾಂಕ: 27ನೇ ಜೂನ್,2022</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, 2022-23ನೇ ಆಯವ್ಯಯ ಭಾಷಣ ಕಂಡಿಕೆ (366)ರಂತೆ ರಾಜ್ಯದಿಂದ ಕಾಶಿ ಯಾತ್ರೆಯನ್ನು ಕೈಗೊಳ್ಳುವ 30,000 ಯಾತ್ರಾರ್ಥಿಗಳಿಗೆ ಸರ್ಕಾರದಿಂದ ತಲಾ ರೂ.5000/-ಗಳ ಸಹಾಯ ಧನವನ್ನು ನೀಡಲು ಲೆಕ್ಕ ಶೀರ್ಷಿಕೆ "2250-00-103-5-08-100 Assistance to Manasa Sarovar Priligrims ಅಡಿಯಲ್ಲಿ ಒದಗಿಸಿರುವ ರೂ.700.00 ಲಕ್ಷ (ಏಳು ನೂರು ಲಕ್ಷ ರೂಪಾಯಿಗಳು ಮಾತ್ರ)ಗಳನ್ನು ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ರವರಿಗೆ ಬಿಡುಗಡೆಗೊಳಿಸಲು ಮಂಜೂರಾತಿ ನೀಡಿ ಆದೇಶಿಸಲಾಗಿದೆ.

ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಅನುಬಂಧದಲ್ಲಿರುವ ಮಾರ್ಗಸೂಚಿಗಳನ್ನು ಅನುಸರಿಸತಕ್ಕದ್ದು;

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

M.L. Varalakshmi 27/6/22
(ಎಂ.ಎಲ್.ವರಲಕ್ಷ್ಮೀ)
ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ (ಧಾರ್ಮಿಕ ದತ್ತಿ ಇಲಾಖೆ)

<u>**ಇವರಿಗೆ:**</u>

1. ಪ್ರಧಾನ ಮಹಾಲೇಖಪಾಲರು, (ಜಿ & ಎಸ್.ಎಸ್.ಎ.)ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಇ&ಆರ್.ಎಸ್.ಎ.)ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನ' ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು, (ಎ&ಇ)ರವರ ಕಾರ್ಯದರ್ಶಿ, ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರವಾಸೋದ್ಯಮ ಇಲಾಖೆ ಇವರ ಆಪ್ತ ಕಾರ್ಯದರ್ಶಿ
5. ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ, ಬೆಂಗಳೂರು.
6. ಆಂತರಿಕ ಆರ್ಥಿಕ ಸಲಹೆಗಾರರು ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಯುವ ಸಬಲೀಕರಣ, ಕ್ರೀಡಾ ಹಾಗೂ ಕಂದಾಯ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
7. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವೆಚ್ಚ-7&8, ವಿಧಾನಸೌಧ, ಬೆಂಗಳೂರು.
8. ನಿರ್ದೇಶಕರು, ಪರಿಯೋಜನಾ ರಚನಾ ವಿಭಾಗ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.

<u>**ಪ್ರತಿ:**</u>

1. ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಧಾರ್ಮಿಕ ದತ್ತಿ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತಕಾರ್ಯದರ್ಶಿಗಳು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
5. ಸರ್ಕಾರದ ಉಪ ಕಾರ್ಯದರ್ಶಿ, ಕಂದಾಯ ಇಲಾಖೆ (ಧಾರ್ಮಿಕ ದತ್ತಿ) ಇವರ ಆಪ್ತ ಕಾರ್ಯದರ್ಶಿ.
6. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.

# ಅನುಬಂಧ

ಸರ್ಕಾರದ ಆದೇಶ ಸಂಖ್ಯೆ: RD/174/MABI/2022,
ಬೆಂಗಳೂರು, ದಿನಾಂಕ: 27.06.2022.

## ಕಾಶಿಯಾತ್ರೆ ಕೈಗೊಳ್ಳಲು ಅನುಸರಿಸಬೇಕಾದ ಮಾರ್ಗಸೂಚಿಗಳು

1. ಕರ್ನಾಟಕ ರಾಜ್ಯದಿಂದ ಕಾಶಿ [illegible] ಕೈಗೊಳ್ಳುವ ಕಾಶಿ ಯಾತ್ರಾರ್ಥಿಗಳಿಗೆ ತಲಾ ರೂ.5,000/- ಗಳನ್ನು ಸಹಾಯಧನವಾಗಿ [illegible].

2. ಕರ್ನಾಟಕ ರಾಜ್ಯದ [illegible] ಸಹಾಯಧನ ಪಡೆಯಲು [illegible] ದಾಖಲೆಗಳನ್ನು ಕಡ್ಡಾಯವಾಗಿ [illegible].
   - ಕರ್ನಾಟಕ ರಾಜ್ಯ [illegible] "ಗುರುತಿನ ಚೀಟಿ" ಅಥವಾ
   - ಆಧಾರ್ ಗುರುತಿನ ಚೀಟಿ [illegible]
   - ರೇಷನ್ ಕಾರ್ಡ್ .

3. ಕರ್ನಾಟಕ ರಾಜ್ಯದಿಂದ ಕಾಶಿ ಯಾತ್ರೆ ಕೈಗೊಳ್ಳುವ ಯಾತ್ರಾರ್ಥಿಗಳು ಆಯಾ ಆರ್ಥಿಕ ವರ್ಷದ ಮೊದಲ ದಿನಕ್ಕೆ ಅನ್ವಯಿಸುವಂತೆ ಏಪ್ರಿಲ್ 1 ಕ್ಕೆ 18 ವರ್ಷಗಳ ಮೇಲ್ಪಟ್ಟವರಾಗಿರತಕ್ಕದ್ದು, 18 ವಯಸ್ಸಿನ ಕೆಳಗಿನವರ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. 18 ವರ್ಷ ಮೇಲ್ಪಟ್ಟ ಯಾತ್ರಾರ್ಥಿಗಳು ವಯಸ್ಸಿಗೆ ಸಂಬಂಧಿಸಿದ ಸೂಕ್ತ ದಾಖಲೆಯನ್ನು ಹಾಜರುಪಡಿಸುವುದು.

4. ದಿನಾಂಕ:01-04-2022 ರಿಂದ ದಿನಾಂಕ:30-06-2022ರವರೆಗೆ ಕಾಶಿ ಶ್ರೀ ವಿಶ್ವನಾಥ ಸ್ವಾಮಿಯ ದರ್ಶನಕ್ಕೆ ತೆರಳಿದ ಯಾತ್ರಾರ್ಥಿಗಳು ಸಂಬಂಧಿಸಿದ ದಾಖಲಾತಿ (ಕಾಶಿ ಶ್ರೀ ವಿಶ್ವನಾಥ ಸ್ವಾಮಿ ದೇವಾಲಯಕ್ಕೆ ತೆರಳಲು ಮುಂಗಡವಾಗಿ ಕಾಯ್ದಿರಿಸಿದ ಮತ್ತು ಹಿಂದಿರುಗಿದ ಬಗ್ಗೆ ಕಾಯ್ದಿರಿಸಿದ ಟಿಕೇಟ್, ಛಾಯಾಚಿತ್ರ, ಪೂಜಾ ರಶೀದಿ, ಅಥವಾ ದೇವಾಲಯಕ್ಕೆ ತೆರಳಿ/ಮರಳಿದ ಬಗ್ಗೆ ಯಾವುದಾದರೂ ಇತರೆ ದಾಖಲೆ)ಗಳನ್ನು ಮುದ್ದಾಂ ಆಗಿ ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ, ಇವರ ಕಛೇರಿಗೆ ಸಲ್ಲಿಸತಕ್ಕದ್ದು.

5. ದಿನಾಂಕ:01.07.2022 ರಿಂದ ಅನ್ವಯವಾಗುವಂತೆ ಯಾತ್ರಾರ್ಥಿಗಳು ಕಾಶಿ ಯಾತ್ರೆ ಕೈಗೊಂಡಿರುವ ಬಗ್ಗೆ, ಸಂಬಂಧಿಸಿದ ದಾಖಲೆಗಳನ್ನು ವ್ಯವಸ್ಥಾಪಕರು, ಕರ್ನಾಟಕ ರಾಜ್ಯ ಛತ್ರ, ವಾರಣಾಸಿ ಇವರ ಕಛೇರಿಯಿಂದ ಬಯೋಮೆಟ್ರಿಕ್ ದೃಢೀಕರಣದೊಂದಿಗೆ, ಆನ್‌ಲೈನ್ ಅಥವಾ ಮುದ್ದಾಂ/ನೊಂದಾಯಿತ ಅಂಚೆ ಮೂಲಕ, ಆಯುಕ್ತರು ಧಾರ್ಮಿಕ ದತ್ತಿ ಇಲಾಖೆ ಇವರ ಕಛೇರಿಗೆ ಸಲ್ಲಿಸತಕ್ಕದ್ದು. ಒಂದು ವೇಳೆ ವ್ಯವಸ್ಥಾಪಕರು ಕರ್ನಾಟಕ ರಾಜ್ಯ ಛತ್ರ, ವಾರಣಾಸಿ ಇವರ ದೃಢೀಕರಣ ಇಲ್ಲದಿದ್ದಲ್ಲಿ ಅಂತಹ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

6. ಯಾತ್ರಾರ್ಥಿಗಳು ಸಹಾಯಧನವನ್ನು ಒಂದು ಬಾರಿ ಪಡೆದ ನಂತರದಲ್ಲಿ, ಅದೇ ವ್ಯಕ್ತಿಗೆ ಎರಡನೇ ಬಾರಿ ಅನುದಾನ ನೀಡಲು ಪರಿಗಣಿಸಲಾಗುವುದಿಲ್ಲ.

7. ಸರ್ಕಾರದ ಸಹಾಯಧನಕ್ಕಾಗಿ ಅರ್ಜಿ ಸಲ್ಲಿಸುವ ಯಾತ್ರಾರ್ಥಿಗಳ ಬ್ಯಾಂಕ್ ಖಾತೆಯು ರಾಷ್ಟ್ರೀಕೃತ ಬ್ಯಾಂಕಿನ ಖಾತೆಯಾಗಿರಬೇಕು ಮತ್ತು ಕಡ್ಡಾಯವಾಗಿ ಆಧಾರ್ ಲಿಂಕ್ ಆಗಿರತಕ್ಕದ್ದು.

8. ಸದರಿ ಸಹಾಯಧನವನ್ನು ಯಾತ್ರೆಯನ್ನು ಪೂರ್ಣಗೊಳಿಸಿ ಸಂಬಂಧಿಸಿದ ದಾಖಲೆಗಳನ್ನು ನಿಗದಿತ ನಮೂನೆ ಅರ್ಜಿಯನ್ನು ಭರ್ತಿ ಮಾಡಿ ಒದಗಿಸಿದ ನಂತರ ಸದರಿ ಅರ್ಜಿಗಳನ್ನು ಧಾರ್ಮಿಕ ದತ್ತಿ ಆಯುಕ್ತರು ಸ್ವೀಕರಿಸಿ, ಪರಿಶೀಲಿಸಿ ಅನುದಾನ ಮಂಜೂರು ಮಾಡಲು ಕ್ರಮ ಕೈಗೊಳ್ಳುವುದು.

......2

9. ಕಾಶಿ ಯಾತ್ರೆ ಪೂರ್ಣಗೊಳಿಸಿದ ಯಾತ್ರಾರ್ಥಿಗಳು ಅಗತ್ಯ ದಾಖಲೆಗಳೊಂದಿಗೆ ತಮ್ಮ ಅರ್ಜಿಗಳನ್ನು ಗರಿಷ್ಠ 30000 ಯಾತ್ರಾರ್ಥಿಗಳ ಅರ್ಜಿಗಳು ಸ್ವೀಕೃತವಾಗುವವರೆಗೆ ಸಹಾಯಧನ ಮಂಜೂರು ಮಾಡಲು ಪರಿಗಣಿಸಲಾಗುವುದು. ನಂತರ ಸ್ವೀಕೃತವಾಗುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ, ಸದರಿ ಸಹಾಯಧನವನ್ನು ಆಯಾ ಆರ್ಥಿಕ ಸಾಲಿನಲ್ಲಿ ಯಾತ್ರೆ ಕೈಗೊಂಡ ಯಾತ್ರಾರ್ಥಿಗಳಿಗೆ ಮಾತ್ರ ಮಂಜೂರು ಮಾಡಲಾಗುವುದು.

10. ಸರ್ಕಾರದಿಂದ ಮಂಜೂರು ಮಾಡಿರುವ ಅನುದಾನ ಲಭ್ಯತೆಗನುಗುಣವಾಗಿ ಯಾತ್ರಾರ್ಥಿಗಳಿಗೆ ಸಹಾಯಧನವನ್ನು ನೀಡಲಾಗುವುದರಿಂದ ಮೊದಲು ಬಂದ ಯಾತ್ರಾರ್ಥಿಗಳಿಗೆ ಆದ್ಯತೆಯನ್ನು ನೀಡಲಾಗಿರುತ್ತದೆ.

M.L. Varalakshmi
(ಎಂ.ಎಲ್.ವರಲಕ್ಷ್ಮಿ) 27/6/22
ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ (ಧಾರ್ಮಿಕ ದತ್ತಿ ಇಲಾಖೆ)

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಕರ್ನಾಟಕ ರಾಜ್ಯದಿಂದ ಕೈಲಾಸ ಮಾನಸ ಸರೋವರ, ಚಾರ್‌ಧಾಮ್ ಮತ್ತು ಕಾಶಿ ಯಾತ್ರೆಯನ್ನು ಕೈಗೊಳ್ಳುವ ಯಾತ್ರಾರ್ಥಿಗಳಿಗೆ ಸರ್ಕಾರದ ವತಿಯಿಂದ ಸಹಾಯಧನವನ್ನು ನೀಡುವ ಕುರಿತು.

ಓದಲಾಗಿದೆ:- 1) ಸರ್ಕಾರದ ಆದೇಶ ಸಂಖ್ಯೆ: ಕಂಇ 10 ಮುಅಬಿ 2019 ದಿನಾಂಕ:15.10.2019
2) ಸರ್ಕಾರದ ಆದೇಶ ಸಂಖ್ಯೆ: ಕಂಇ 11 ಮುಅಬಿ 2019 ದಿನಾಂಕ:15.10.2019
3) ಸರ್ಕಾರದ ಆದೇಶ ಸಂಖ್ಯೆ: ಕಂಇ 174 ಮುಅಬಿ 2022 ದಿನಾಂಕ:27.06.2022
4) ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ರವರ ಪ್ರಸ್ತಾವನೆ ಸಂಖ್ಯೆ: HRICE-CDMS0MS/1/2023- CDMSEND-HRICE

* * * * *

ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿನ ಸರ್ಕಾರದ ಆದೇಶದಲ್ಲಿ, 2019-20ನೇ ಸಾಲಿನಲ್ಲಿ ಕರ್ನಾಟಕ ರಾಜ್ಯದಿಂದ ಕೈಲಾಸ ಮಾನಸ ಸರೋವರ ಯಾತ್ರೆಯನ್ನು ಕೈಗೊಳ್ಳುವ ಯಾತ್ರಾರ್ಥಿಗಳಿಗೆ ಸರ್ಕಾರದ ವತಿಯಿಂದ ಸಹಾಯಧನವನ್ನು ಪಾವತಿಸಲು ಅನುಸರಿಸಬೇಕಾದ ಮಾರ್ಗಸೂಚಿಗಳನ್ನು ಹೊರಡಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿನ ಸರ್ಕಾರದ ಆದೇಶದಲ್ಲಿ, 2019-20ನೇ ಸಾಲಿನಲ್ಲಿ ಕರ್ನಾಟಕ ರಾಜ್ಯದ ವತಿಯಿಂದ ಚಾರಧಾಮ್(ಬದರಿನಾಥ್, ಕೇದಾರನಾಥ್, ಗಂಗೋತ್ರಿ, ಯಮುನೋತ್ರಿ) ಯಾತ್ರೆಯನ್ನು ಕೈಗೊಳ್ಳುವ ಯಾತ್ರಾರ್ಥಿಗಳಿಗೆ ಸರ್ಕಾರದ ವತಿಯಿಂದ ಸಹಾಯಧನವನ್ನು ಪಾವತಿಸಲು ಅನುಸರಿಸಬೇಕಾದ ಮಾರ್ಗಸೂಚಿಗಳನ್ನು ಹೊರಡಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರಲ್ಲಿನ ಸರ್ಕಾರದ ಆದೇಶದಲ್ಲಿ, 2022-23ನೇ ಸಾಲಿನ ಆಯವ್ಯಯ ಭಾಷಣದಲ್ಲಿನ ಕಂಡಿಕೆ-366ರಲ್ಲಿನ ಘೋಷಣೆಯಂತೆ ಕರ್ನಾಟಕ ರಾಜ್ಯದಿಂದ ಕಾಶಿ ಯಾತ್ರೆಯನ್ನು ಕೈಗೊಳ್ಳುವ ಯಾತ್ರಾರ್ಥಿಗಳಿಗೆ ಸರ್ಕಾರದ ವತಿಯಿಂದ ಸಹಾಯಧನವನ್ನು ಪಾವತಿಸಲು ಅನುಸರಿಸಬೇಕಾದ ಮಾರ್ಗಸೂಚಿಗಳನ್ನು ಹೊರಡಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4)ರಲ್ಲಿನ ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ರವರ ಪ್ರಸ್ತಾವನೆಯಲ್ಲಿ, ಕರ್ನಾಟಕ ರಾಜ್ಯದಿಂದ ಕೈಲಾಸ ಮಾನಸ ಸರೋವರ, ಚಾರ್‌ಧಾಮ್ ಮತ್ತು ಕಾಶಿ ಯಾತ್ರೆಯನ್ನು ಕೈಗೊಳ್ಳುವ ಯಾತ್ರಾರ್ಥಿಗಳಿಗೆ ಸರ್ಕಾರದ ಸಹಾಯಧನವನ್ನು ವಿತರಿಸುವ ಸಂಬಂಧ ಪರಿಷ್ಕೃತ ಮಾರ್ಗಸೂಚಿಯನ್ನು ಹೊರಡಿಸುವಂತೆ ಕೋರಿರುತ್ತಾರೆ.

.....2

Scanned with CamScanner

ಆದ್ದರಿಂದ, ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆರವರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕಂಇ 166 ಮುಅಬಿ 2022**
**ಬೆಂಗಳೂರು; ದಿನಾಂಕ:21-02-2024**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ರಾಜ್ಯದಿಂದ ಕೈಲಾಸ ಮಾನಸ ಸರೋವರ, ಚಾರ್‌ಧಾಮ್ ಮತ್ತು ಕಾಶಿ ಯಾತ್ರೆಯನ್ನು ಕೈಗೊಳ್ಳುವ ಯಾತ್ರಾರ್ಥಿಗಳಿಗೆ ಸರ್ಕಾರದ ಸಹಾಯಧನವನ್ನು ವಿತರಿಸುವ ಸಂಬಂಧ ಈ ಹಿಂದೆ ಹೊರಡಿಸಲಾಗಿದ್ದ ಈ ಕೆಳಕಂಡ ಆದೇಶಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಿಂಪಡೆಯಲಾಗಿದೆ:-

(1) ಸರ್ಕಾರದ ಆದೇಶ ಸಂಖ್ಯೆ: ಕಂಇ 10 ಮುಅಬಿ 2019 ದಿನಾಂಕ:15.10.2019,
(2) ಸರ್ಕಾರದ ಆದೇಶ ಸಂಖ್ಯೆ: ಕಂಇ 11 ಮುಅಬಿ 2019 ದಿನಾಂಕ:15.10.2019
(3) ಸರ್ಕಾರದ ಆದೇಶ ಸಂಖ್ಯೆ: ಕಂಇ 174 ಮುಅಬಿ 2022 ದಿನಾಂಕ:27.06.2022

ಕರ್ನಾಟಕ ರಾಜ್ಯದಿಂದ ಕೈಲಾಸ ಮಾನಸ ಸರೋವರ ಯಾತ್ರೆ ಕೈಗೊಂಡ ಯಾತ್ರಾರ್ಥಿಗಳಿಗೆ ತಲಾ ರೂ.30,000/- (ಮೂವತ್ತು ಸಾವಿರ ಮಾತ್ರ) ಗಳಂತೆ, ಚಾರ್‌ಧಾಮ್ (ಗಂಗೋತ್ರಿ, ಯಮುನೋತ್ರಿ, ಕೇದಾರ್‌ನಾಥ್ ಮತ್ತು ಬದರೀನಾಥ್) ಯಾತ್ರೆ ಕೈಗೊಂಡ ಯಾತ್ರಾರ್ಥಿಗಳಿಗೆ ತಲಾ ರೂ.20,000/- (ಇಪ್ಪತ್ತು ಸಾವಿರ ಮಾತ್ರ) ಗಳಂತೆ ಮತ್ತು ಕಾಶಿ ಯಾತ್ರೆಯನ್ನು ಕೈಗೊಂಡ 30,000 ಯಾತ್ರಾರ್ಥಿಗಳಿಗೆ ತಲಾ ರೂ.5,000/-ಗಳಂತೆ ಒಂದು ಬಾರಿ ಮಾತ್ರ ಸಹಾಯಧನ ನೀಡಲಾಗುವುದು.

ಈ ಯೋಜನೆಗಳಿಗೆ ಸಂಬಂಧಿಸಿದಂತೆ ಯಾತ್ರಾರ್ಥಿಗಳಿಗೆ ಸಹಾಯಧನವನ್ನು ಪಾವತಿಸಲು ಅನುಸರಿಸಬೇಕಾದ ಮಾರ್ಗಸೂಚಿಗಳನ್ನು ಅನುಬಂಧ-1, ಅನುಬಂಧ-2 ಹಾಗೂ ಅನುಬಂಧ-3 ರಲ್ಲಿರುವಂತೆ ಆದೇಶಿಸಲಾಗಿದೆ. ಈ ವೆಚ್ಚಗಳಿಗೆ ತಗಲುವ ವೆಚ್ಚವನ್ನು ಲೆಕ್ಕ ಶೀರ್ಷಿಕೆ "2250-00-103-5-08(100) ಮಾನಸ ಸರೋವರ ಭಕ್ತಾದಿಗಳಿಗೆ ನೆರವು" ಇದರಡಿಯಲ್ಲಿ ಭರಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕೆ.ಪಿ ಹೇಮಂತರಾಜು)
ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ (ಧಾರ್ಮಿಕ ದತ್ತಿ)

ಗೆ,
ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು.

ಇವರಿಗೆ:-

1. ಮಹಾಲೇಖಪಾಲರು, (ಲೆಕ್ಕ ಪತ್ರ & ಲೆಕ್ಕ ಪರಿಶೋಧನೆ) ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ, ಬೆಂಗಳೂರು.

.....3

Scanned with CamScanner

3. ಸಂಬಂಧಪಟ್ಟವರಿಗೆ - (ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ಇವರ ಮೂಲಕ)

ಪ್ರತಿ:-

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
2. ಸರ್ಕಾರದ ಉಪ ಕಾರ್ಯದರ್ಶಿ, ಕಂದಾಯ ಇಲಾಖೆ (ಧಾರ್ಮಿಕ ದತ್ತಿ, ಭೂಮಿ & ಯು.ಪಿ.ಓ.ಆರ್) ಇವರ ಆಪ್ತ ಸಹಾಯಕರು.
3. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ

Scanned with CamScanner

**ಸರ್ಕಾರದ ಆದೇಶ ಸಂಖ್ಯೆ: ಕಂಇ 166 ಮುಅಬಿ 2022**
**ಬೆಂಗಳೂರು; ದಿನಾಂಕ:21-02-2024**
**ಅನುಬಂಧ-1**

**ಕೈಲಾಸ ಮಾನಸ ಸರೋವರ ಯಾತ್ರೆಯನ್ನು ಕೈಗೊಳ್ಳುವ ಯಾತ್ರಾರ್ಥಿಗಳಿಗೆ ಸರ್ಕಾರದ ವತಿಯಿಂದ ಸಹಾಯಧನವನ್ನು ಪಾವತಿಸಲು ಅನುಸರಿಸಬೇಕಾದ ಪರಿಷ್ಕೃತ ಮಾರ್ಗಸೂಚಿಗಳು**

ಕರ್ನಾಟಕ ರಾಜ್ಯದಿಂದ ಕೈಲಾಸ ಮಾನಸ ಸರೋವರ ಯಾತ್ರೆಯನ್ನು ಕೈಗೊಂಡ ಯಾತ್ರಾರ್ಥಿಗಳಿಗೆ ಒಂದು ಬಾರಿ ಧನ ಸಹಾಯ ನೀಡುವ ದೃಷ್ಠಿಯಿಂದ ಈ ಯೋಜನೆಯನ್ನು ರೂಪಿಸಲಾಗಿದೆ.

1. ಕರ್ನಾಟಕ ರಾಜ್ಯದಿಂದ ಕೈಲಾಸ ಮಾನಸ ಸರೋವರ ಯಾತ್ರೆ ಕೈಗೊಂಡ ಯಾತ್ರಾರ್ಥಿಗಳಿಗೆ ತಲಾ ರೂ.30,000/- (ಮೂವತ್ತು ಸಾವಿರ ಮಾತ್ರ) ಗಳಂತೆ ಧನ ಸಹಾಯವನ್ನು ನೀಡುವುದು.

2. ಕರ್ನಾಟಕದ ಖಾಯಂ ನಿವಾಸಿಗಳು ಮಾತ್ರ ಈ ಧನ ಸಹಾಯವನ್ನು ಪಡೆಯಲು ಅರ್ಹರಾಗಿರುತ್ತಾರೆ. ಈ ಉದ್ದೇಶಕ್ಕಾಗಿ ಪಾಸ್‌ಪೋರ್ಟ್‌ನಲ್ಲಿ ನಮೂದಿಸಲಾಗಿರುವ ವಿಳಾಸ ಹಾಗೂ ಜನ್ಮ ಸ್ಥಳವನ್ನು ಪರಿಗಣಿಸಲಾಗುವುದು.

3. ಕೈಲಾಸ ಮಾನಸ ಸರೋವರ ಯಾತ್ರೆಯನ್ನು ಕೈಗೊಂಡ ಯಾತ್ರಾರ್ಥಿಗಳು ಸರ್ಕಾರದ ಸಹಾಯಧನವನ್ನು ಪಡೆಯಲು ಇಚ್ಛಿಸಿದಲ್ಲಿ, ಆಯಾ ಆರ್ಥಿಕ ಸಾಲಿನಲ್ಲಿ ಆಯುಕ್ತರು ಧಾರ್ಮಿಕ ದತ್ತಿ ಇಲಾಖೆ ಇವರು ನಿಗಧಿಪಡಿಸಲಾಗುವ ದಿನಾಂಕಗಳ ಒಳಗೆ ಅಗತ್ಯ ದಾಖಲೆಗಳೊಂದಿಗೆ ರೂ.25/-ಗಳ ಶುಲ್ಕ ಪಾವತಿಸಿ ಸಂಬಂಧಿಸಿದ ವೆಬ್‌ಸೈಟ್ ಅಥವಾ ಮೊಬೈಲ್ ಆಪ್ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು. ನಿಗಧಿಪಡಿಸಿದ ಅವಧಿ ಪೂರ್ಣಗೊಂಡ ನಂತರ ಸಲ್ಲಿಸಲಾಗುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ, ಸದರಿ ಸಹಾಯಧನವನ್ನು ಆಯಾ ಆರ್ಥಿಕ ಸಾಲಿನಲ್ಲಿ ಯಾತ್ರೆ ಕೈಗೊಂಡ ಯಾತ್ರಾರ್ಥಿಗಳಿಗೆ ಮಾತ್ರ ಮಂಜೂರು ಮಾಡಲಾಗುವುದು.

4. ಕೇಂದ್ರ ಸರ್ಕಾರ ವಿದೇಶಾಂಗ ವ್ಯವಹಾರಗಳ ಸಚಿವಾಲಯವು ಆಯೋಜಿಸಿರುವ ಮಾರ್ಗವಾಗಿ ಯಾತ್ರೆ ಕೈಗೊಂಡ ಯಾತ್ರಾರ್ಥಿಗಳು ಕೇಂದ್ರ ಸರ್ಕಾರದ ವಿದೇಶಾಂಗ ವ್ಯವಹಾರಗಳ ಸಚಿವಾಲಯ ನೀಡುವ ಪ್ರಮಾಣ ಪತ್ರ ಹಾಗೂ ಗ್ರೂಪ್ ವೀಸಾ, ಪಾಸ್‌ಪೋರ್ಟ್‌ನ ಮುಖಪುಟ, ವಿಳಾಸ ಮತ್ತು ಮುದ್ರಿತ ಸೀಲಿನ ಭಾಗದ ಪ್ರತಿ (ಕಲರ್ ಜೆರಾಕ್ಸ್) ನ್ನು ಅಪ್‌ಲೋಡ್ ಮಾಡುವುದು.

5. ನೇಪಾಳ ಮಾರ್ಗವಾಗಿ ಹೋಗಿ ಬಂದವರಿಗೆ ಚೀನಾ ಸರ್ಕಾರದ ಉದ್ದಿಮೆಯಾದ ಸಿ.ಐ.ಪಿ.ಎಸ್.ಸಿ (C.I.P.S.C) (China India Pilgrim Service Certificate) ಲಾಸ್ಸಾ, ಟಿಬೆಟ್ ಚೀನಾ ನೀಡುವ ಪ್ರಮಾಣ ಪತ್ರ ಹಾಗೂ ಗ್ರೂಪ್ ವೀಸಾ, ಪಾಸ್‌ಪೋರ್ಟ್‌ನ ಮುಖಪುಟ, ವಿಳಾಸ ಮತ್ತು ಮುದ್ರಿತ ಸೀಲಿನ ಭಾಗದ ಪ್ರತಿ (ಕಲರ್ ಜೆರಾಕ್ಸ್) ನ್ನು ಅಪ್‌ಲೋಡ್ ಮಾಡುವುದು.

6. ಯಾತ್ರೆಯನ್ನು ಕೈಗೊಳ್ಳುವ ಬಗ್ಗೆ ಭಾರತ ಸರ್ಕಾರಕ್ಕೆ ಅರ್ಜಿ ಸಲ್ಲಿಸುವ ಮತ್ತು ಸದರಿ ಅರ್ಜಿಯ ಬಗ್ಗೆ ಸಂಬಂಧಿಸಿದ ಪ್ರಕ್ರಿಯೆಗಳಿಗೆ ತಗಲುವ ಸಂಪೂರ್ಣ ವೆಚ್ಚವನ್ನು ಹಾಗೂ ಚೀನಾ ದೇಶಕ್ಕೆ ಪಾವತಿಸಬೇಕಾಗುವ ಮೊತ್ತವನ್ನು ಸಂಬಂಧಪಟ್ಟ ಯಾತ್ರಾರ್ಥಿಗಳೇ ಭರಿಸತಕ್ಕದ್ದು.

.....2


Scanned with CamScanner

7. ಯಾತ್ರಾರ್ಥಿಗಳು ಸಹಾಯಧನವನ್ನು ಒಂದು ಬಾರಿ ಪಡೆದ ನಂತರದಲ್ಲಿ ಅದೇ ವ್ಯಕ್ತಿಗೆ ಮತ್ತೊಮ್ಮೆ ಅನುದಾನ ನೀಡಲಾಗುವುದಿಲ್ಲ, ಈ ಬಗ್ಗೆ ಯಾತ್ರಾರ್ಥಿಗಳು ರೂ.20/-ಗಳ ಛಾಪಾ ಕಾಗದ (E-Stamp Paper)ದಲ್ಲಿ ಈ ಹಿಂದೆ ಸಹಾಯಧನವನ್ನು ಪಡೆದಿಲ್ಲವೆಂದು ಸ್ವಯಂದೃಢೀಕರಿಸಿ ನೋಟರಿ ಮೊಹರು ಮತ್ತು ಸಹಿಯೊಂದಿಗೆ ದೃಢೀಕರಣವನ್ನು ಅಪ್‌ಲೋಡ್ ಮಾಡತಕ್ಕದ್ದು.

8. ನಿಗಧಿತ ಅವಧಿಯಲ್ಲಿ ಸ್ವೀಕರಿಸಿದ ಎಲ್ಲಾ ಅರ್ಜಿಗಳನ್ನು ಪರಿಶೀಲಿಸಿ, ಅರ್ಹ ಅರ್ಜಿದಾರರ ಸಂಖ್ಯೆಯು ಆಯಾ ಆರ್ಥಿಕ ಸಾಲಿನಲ್ಲಿ ಸರ್ಕಾರದಿಂದ ಮಂಜೂರು ಮಾಡಿದ ಅನುದಾನ ಲಭ್ಯತೆಗೂ ಮೀರಿ ಸ್ವೀಕೃತವಾದಲ್ಲಿ, ಲಾಟರಿ ಮುಖಾಂತರ ಅನುದಾನಕ್ಕನುಗುಣವಾಗಿ ಫಲಾನುಭವಿಗಳನ್ನು ಆಯ್ಕೆ ಮಾಡಿ ಸಹಾಯಧನವನ್ನು ಡಿ.ಬಿ.ಟಿ (DBT) ಮೂಲಕ ಆಯ್ಕೆಗೊಂಡ ಯಾತ್ರಾರ್ಥಿಗಳ ಬ್ಯಾಂಕ್ ಖಾತೆಗೆ ನೇರವಾಗಿ ಜಮಾ ಮಾಡಲಾಗುವುದು. ಈ ಬಗ್ಗೆ ಯಾತ್ರಾರ್ಥಿಗಳು ಕಡ್ಡಾಯವಾಗಿ ತಮ್ಮ ಆಧಾರ್‌ನ್ನು ಬ್ಯಾಂಕ್ ಖಾತೆಗೆ ಲಿಂಕ್ ಮಾಡಿರತಕ್ಕದ್ದು ಹಾಗೂ ಖಾತೆಯನ್ನು ಚಾಲ್ತಿಯಲ್ಲಿಟ್ಟುಕೊಳ್ಳತಕ್ಕದ್ದು.

9. ಸದರಿ ಲಾಟರಿಯನ್ನು ರಾಜ್ಯ ಧಾರ್ಮಿಕ ಪರಿಷತ್ತಿನ ನ್ಯಾಯಿಕ ಸದಸ್ಯರು, ಕೇಂದ್ರಸ್ಥಾನಿಕ ಸಹಾಯಕರು-2 ಹಾಗೂ ಪ್ರವರ್ಗ 'ಎ' ದೇವಾಲಯದ ಮೂರು ಜನ ಕಾರ್ಯನಿರ್ವಾಹಕ ಅಧಿಕಾರಿಗಳನ್ನೊಳಗೊಂಡ 05 ಜನ ಸದಸ್ಯರ ಹಾಗೂ ಅರ್ಜಿದಾರರ ಸಮಕ್ಷಮದಲ್ಲಿ ಪೂರ್ಣವಾಗಿ ವೀಡಿಯೋ ಚಿತ್ರೀಕರಣದೊಂದಿಗೆ ಮಾಡುವುದು.

10. ಸಹಾಯಧನಕ್ಕಾಗಿ ಕೋರಿ ಬಂದಂತಹ ಅರ್ಜಿಗಳನ್ನು ಧಾರ್ಮಿಕ ದತ್ತಿ ಆಯುಕ್ತರು ಸ್ವೀಕರಿಸಿ, ಪರಿಶೀಲಿಸಿ ಅನುದಾನ ಮಂಜೂರು ಮಾಡಲು ಕ್ರಮ ಕೈಗೊಳ್ಳುವುದು.

11. ಯಾತ್ರಾರ್ಥಿಗಳ ಅನುಕೂಲಕ್ಕಾಗಿ ಮಾರ್ಗಸೂಚಿಯನ್ನು ಇಲಾಖೆಯ ಅಧಿಕೃತ ವೆಬ್‌ಸೈಟ್ ನಲ್ಲಿ ಪ್ರಕಟಿಸುವುದು.

ಕೆ.ಪಿ ಹೇಮಂತರಾಜು

(ಕೆ.ಪಿ ಹೇಮಂತರಾಜು)
ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ (ಧಾರ್ಮಿಕ ದತ್ತಿ)

Scanned with CamScanner

<u>ಸರ್ಕಾರದ ಆದೇಶ ಸಂಖ್ಯೆ: ಕಂಇ 166 ಮುಅಬಿ 2022</u>
<u>ಬೆಂಗಳೂರು; ದಿನಾಂಕ:21-02-2024</u>
ಅನುಬಂಧ-2

**ಕರ್ನಾಟಕ ರಾಜ್ಯದ ವತಿಯಿಂದ ಚಾರಧಾಮ್(ಬದರಿನಾಥ್, ಕೇದಾರನಾಥ್, ಗಂಗೋತ್ರಿ, ಯಮುನೋತ್ರಿ) ಯಾತ್ರೆಯನ್ನು ಕೈಗೊಳ್ಳುವ ಯಾತ್ರಾರ್ಥಿಗಳಿಗೆ ಸರ್ಕಾರದ ವತಿಯಿಂದ ಸಹಾಯಧನವನ್ನು ಪಾವತಿಸಲು ಅನುಸರಿಸಬೇಕಾದ ಪರಿಷ್ಕೃತ ಮಾರ್ಗಸೂಚಿಗಳು**

ಕರ್ನಾಟಕ ರಾಜ್ಯದಿಂದ ಮೊದಲ ಬಾರಿ ಚಾರ್‌ಧಾಮ್ (ಗಂಗೋತ್ರಿ, ಯಮುನೋತ್ರಿ, ಕೇದಾರ್‌ನಾಥ್ ಮತ್ತು ಬದರೀನಾಥ್) ಯಾತ್ರೆಯನ್ನು ಕೈಗೊಂಡ ಯಾತ್ರಾರ್ಥಿಗಳಿಗೆ ಧನ ಸಹಾಯ ನೀಡುವ ದೃಷ್ಠಿಯಿಂದ ಈ ಯೋಜನೆಯನ್ನು ರೂಪಿಸಲಾಗಿದೆ.

1. ಕರ್ನಾಟಕ ರಾಜ್ಯದಿಂದ ಚಾರ್‌ಧಾಮ್ (ಗಂಗೋತ್ರಿ, ಯಮುನೋತ್ರಿ, ಕೇದಾರ್‌ನಾಥ್ ಮತ್ತು ಬದರೀನಾಥ್) ಯಾತ್ರೆ ಕೈಗೊಂಡ ಯಾತ್ರಾರ್ಥಿಗಳಿಗೆ ತಲಾ ರೂ.20,000/- (ಇಪ್ಪತ್ತು ಸಾವಿರ ಮಾತ್ರ) ಗಳಂತೆ ಧನ ಸಹಾಯವನ್ನು ನೀಡುವುದು.

2. ಚಾರ್‌ಧಾಮ್ ಯಾತ್ರಾರ್ಥಿಗಳು ನಾಲ್ಕು ಪುಣ್ಯ ಕ್ಷೇತ್ರಗಳ (ಗಂಗೋತ್ರಿ, ಯಮುನೋತ್ರಿ, ಕೇದಾರ್‌ನಾಥ್ ಮತ್ತು ಬದರೀನಾಥ್) ದರ್ಶನವನ್ನು ಪೂರೈಸಿರುವ ಬಗ್ಗೆ ಉತ್ತರಾಖಾಂಡ ಪ್ರವಾಸೋದ್ಯಮ ಇಲಾಖೆಯಿಂದ ನೀಡುವ Yatra Registration Certificate ಮತ್ತು Yatra Completion Certificate (ಕಡ್ಡಾಯವಾಗಿ 04 ಧಾಮಗಳು ನಮೂದಾಗಿರತಕ್ಕದ್ದು)ಅನ್ನು ಕಡ್ಡಾಯವಾಗಿ ಅಪ್‌ಲೋಡ್ ಮಾಡತಕ್ಕದ್ದು.

3. ಕರ್ನಾಟಕದ ಖಾಯಂ ನಿವಾಸಿಗಳು ಮಾತ್ರ ಈ ಧನ ಸಹಾಯವನ್ನು ಪಡೆಯಲು ಅರ್ಹರಾಗಿರುತ್ತಾರೆ. ಈ ಉದ್ದೇಶಕ್ಕಾಗಿ ಚುನಾವಣಾ ಗುರುತಿನ ಚೀಟಿ ಹಾಗೂ ಆಧಾರ್ ಕಾರ್ಡ್ ನ್ನು ಅಪ್‌ಲೋಡ್ ಮಾಡತಕ್ಕದ್ದು.

4. ಈ ಯಾತ್ರೆಯು ಏಪ್ರಿಲ್ ಮಾಹೆಯಲ್ಲಿ ಪ್ರಾರಂಭವಾಗಿ ನವೆಂಬರ್ ಮಾಹೆಯಲ್ಲಿ ಅಂತಿಮಗೊಳ್ಳಲಿದ್ದು, ಚಾರ್‌ಧಾಮ್ ಯಾತ್ರೆಯನ್ನು ಕೈಗೊಂಡ ಯಾತ್ರಾರ್ಥಿಗಳು ಸರ್ಕಾರದ ಸಹಾಯಧನವನ್ನು ಪಡೆಯಲು ಇಚ್ಛಿಸಿದಲ್ಲಿ, ಆಯಾ ಆರ್ಥಿಕ ಸಾಲಿನಲ್ಲಿ ಆಯುಕ್ತರು ಧಾರ್ಮಿಕ ದತ್ತಿ ಇಲಾಖೆ ಇವರು ನಿಗಧಿಪಡಿಸಲಾಗುವ ದಿನಾಂಕಗಳ ಒಳಗೆ ಅಗತ್ಯ ದಾಖಲೆಗಳೊಂದಿಗೆ ರೂ.25/-ಗಳ ಶುಲ್ಕ ಪಾವತಿಸಿ, ಸಂಬಂಧಿಸಿದ ವೆಬ್‌ಸೈಟ್ ಅಥವಾ ಮೊಬೈಲ್ ಆಪ್ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು. ನಿಗಧಿಪಡಿಸಿದ ಅವಧಿ ಪೂರ್ಣಗೊಂಡ ನಂತರ ಸಲ್ಲಿಸಲಾಗುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಸದರಿ ಸಹಾಯಧನವನ್ನು ಆಯಾ ಆರ್ಥಿಕ ಸಾಲಿನಲ್ಲಿ ಯಾತ್ರೆ ಕೈಗೊಂಡ ಯಾತ್ರಾರ್ಥಿಗಳಿಗೆ ಮಾತ್ರ ಮಂಜೂರು ಮಾಡಲಾಗುವುದು.

5. 45 ವರ್ಷ ಮೇಲ್ಪಟ್ಟ ಯಾತ್ರಾರ್ಥಿಗಳು ಮಾತ್ರ ಈ ಯೋಜನೆಯಡಿ ಸಹಾಯಧನವನ್ನು ಪಡೆಯಲು ಅರ್ಹರಾಗಿರುತ್ತಾರೆ. 45 ವರ್ಷ ಮೇಲ್ಪಟ್ಟಿರುವ ಯಾತ್ರಾರ್ಥಿಗಳು ವಯಸ್ಸಿಗೆ ಸಂಬಂಧಿಸಿದ ಸೂಕ್ತ ದಾಖಲೆಯನ್ನು ಅಪ್‌ಲೋಡ್ ಮಾಡುವುದು.

6. ಯಾತ್ರಾರ್ಥಿಗಳು ಸಹಾಯಧನವನ್ನು ಒಂದು ಬಾರಿ ಪಡೆದ ನಂತರದಲ್ಲಿ ಅದೇ ವ್ಯಕ್ತಿಗೆ ಮತ್ತೊಮ್ಮೆ ಅನುದಾನ ನೀಡಲಾಗುವುದಿಲ್ಲ. ಈ ಬಗ್ಗೆ ಯಾತ್ರಾರ್ಥಿಗಳು ರೂ.20/-ಗಳ ಛಾಪಾ ಕಾಗದದಲ್ಲಿ (E-Stamp Paper) ಈ ಹಿಂದೆ ಸಹಾಯಧನವನ್ನು ಪಡೆದಿಲ್ಲವೆಂದು ಸ್ವಯಂದೃಢೀಕರಿಸಿ ನೋಟರಿ ಮೊಹರು ಮತ್ತು ಸಹಿಯೊಂದಿಗೆ ದೃಢೀಕರಣವನ್ನು ಅಪ್‌ಲೋಡ್ ಮಾಡತಕ್ಕದ್ದು.

.....2


Scanned with CamScanner

7. ನಿಗಧಿತ ಅವಧಿಯಲ್ಲಿ ಸ್ವೀಕರಿಸಿದ ಎಲ್ಲಾ ಅರ್ಜಿಗಳನ್ನು ಪರಿಶೀಲಿಸಿ, ಅರ್ಹ ಅರ್ಜಿದಾರರ ಸಂಖ್ಯೆಯು ಆಯಾ ಆರ್ಥಿಕ ಸಾಲಿನಲ್ಲಿ ಸರ್ಕಾರದಿಂದ ಮಂಜೂರು ಮಾಡಿದ ಅನುದಾನ ಲಭ್ಯತೆಗೂ ಮೀರಿ ಸ್ವೀಕೃತವಾದಲ್ಲಿ, ಲಾಟರಿ ಮುಖಾಂತರ ಅನುದಾನಕ್ಕನುಗುಣವಾಗಿ ಫಲಾನುಭವಿಗಳನ್ನು ಆಯ್ಕೆ ಮಾಡಿ ಸಹಾಯಧನವನ್ನು ಡಿ.ಬಿ.ಟಿ (DBT) ಮೂಲಕ ಆಯ್ಕೆಗೊಂಡ ಯಾತ್ರಾರ್ಥಿಗಳ ಬ್ಯಾಂಕ್ ಖಾತೆಗೆ ನೇರವಾಗಿ ಜಮಾ ಮಾಡಲಾಗುವುದು. ಈ ಬಗ್ಗೆ ಯಾತ್ರಾರ್ಥಿಗಳು ಕಡ್ಡಾಯವಾಗಿ ತಮ್ಮ ಆಧಾರ್‌ನ್ನು ಬ್ಯಾಂಕ್ ಖಾತೆಗೆ ಲಿಂಕ್ ಮಾಡಿರತಕ್ಕದ್ದು ಹಾಗೂ ಖಾತೆಯನ್ನು ಚಾಲ್ತಿಯಲ್ಲಿಟ್ಟುಕೊಳ್ಳತಕ್ಕದ್ದು.

8. ಸದರಿ ಲಾಟರಿಯನ್ನು ರಾಜ್ಯ ಧಾರ್ಮಿಕ ಪರಿಷತ್ತಿನ ನ್ಯಾಯಿಕ ಸದಸ್ಯರು, ಕೇಂದ್ರ ಸ್ಥಾನಿಕ ಸಹಾಯಕರು-2, ಹಾಗೂ ಪ್ರವರ್ಗ 'ಎ' ದೇವಾಲಯದ ಮೂರು ಜನ ಕಾರ್ಯನಿರ್ವಾಹಕ ಅಧಿಕಾರಿಗಳನ್ನೊಳಗೊಂಡ 05 ಜನ ಸದಸ್ಯರ ಹಾಗೂ ಅರ್ಜಿದಾರರ ಸಮಕ್ಷಮದಲ್ಲಿ ಪೂರ್ಣವಾಗಿ ವೀಡಿಯೋ ಚಿತ್ರೀಕರಣದೊಂದಿಗೆ ಮಾಡುವುದು.

9. ಸಹಾಯಧನಕ್ಕಾಗಿ ಕೋರಿ ಬಂದಂತಹ ಅರ್ಜಿಗಳನ್ನು ಧಾರ್ಮಿಕ ದತ್ತಿ ಆಯುಕ್ತರು ಸ್ವೀಕರಿಸಿ ಪರಿಶೀಲಿಸಿ ಅನುದಾನ ಮಂಜೂರು ಮಾಡಲು ಕ್ರಮ ಕೈಗೊಳ್ಳುವುದು.

10. ಯಾತ್ರಾರ್ಥಿಗಳ ಅನುಕೂಲಕ್ಕಾಗಿ ಮಾರ್ಗಸೂಚಿಯನ್ನು ಇಲಾಖೆಯ ಅಧಿಕೃತ ವೆಬ್‌ಸೈಟ್ ನಲ್ಲಿ ಪ್ರಕಟಿಸುವುದು.

ಕೆ.ಪಿ ಹೇಮಂತರಾಜು

(ಕೆ.ಪಿ ಹೇಮಂತರಾಜು)
ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ (ಧಾರ್ಮಿಕ ದತ್ತಿ)

Scanned with CamScanner

**ಸರ್ಕಾರದ ಆದೇಶ ಸಂಖ್ಯೆ: ಕಂಇ 166 ಮುಅಬಿ 2022**
**ಬೆಂಗಳೂರು: ದಿನಾಂಕ:21-02-2024**

ಅನುಬಂಧ-3

**ಕರ್ನಾಟಕ ರಾಜ್ಯದಿಂದ ಕಾಶಿ ಯಾತ್ರೆಯನ್ನು ಕೈಗೊಳ್ಳುವ ಯಾತ್ರಾರ್ಥಿಗಳಿಗೆ ಸರ್ಕಾರದ ವತಿಯಿಂದ ಸಹಾಯಧನವನ್ನು ಪಾವತಿಸಲು ಅನುಸರಿಸಬೇಕಾದ ಪರಿಷ್ಕೃತ ಮಾರ್ಗಸೂಚಿಗಳು**

ಕರ್ನಾಟಕ ರಾಜ್ಯದಿಂದ ಕಾಶಿ ಯಾತ್ರೆಯನ್ನು ಕೈಗೊಂಡ 30000 ಯಾತ್ರಾರ್ಥಿಗಳಿಗೆ ಒಂದು ಬಾರಿ ಮಾತ್ರ ಧನ ಸಹಾಯ ನೀಡುವ ದೃಷ್ಟಿಯಿಂದ ಈ ಯೋಜನೆಯನ್ನು ರೂಪಿಸಲಾಗಿದೆ.

1. ಕರ್ನಾಟಕ ರಾಜ್ಯದಿಂದ ಕಾಶಿ ಯಾತ್ರೆ ಕೈಗೊಂಡ ಅರ್ಹ ಯಾತ್ರಾರ್ಥಿಗಳಿಗೆ ತಲಾ ರೂ.5,000/-ಗಳನ್ನು ಸಹಾಯ ಧನವಾಗಿ ನೀಡಲಾಗುವುದು.
2. ಕರ್ನಾಟಕದ ಖಾಯಂ ನಿವಾಸಿಗಳು ಮಾತ್ರ ಈ ಧನ ಸಹಾಯ ಸೌಲಭ್ಯ ಪಡೆಯಲು ಅರ್ಹರಾಗಿರುತ್ತಾರೆ. ಈ ಉದ್ದೇಶಕ್ಕಾಗಿ ಕೆಳಕಂಡ ಯಾವುದಾದರೂ ಒಂದು ದಾಖಲೆಗಳನ್ನು ಕಡ್ಡಾಯವಾಗಿ ಒದಗಿಸತಕ್ಕದ್ದು.
   - ಕರ್ನಾಟಕ ರಾಜ್ಯ ಚುನಾವಣಾ ಆಯೋಗ ನೀಡಿರುವ "ಗುರುತಿನ ಚೀಟಿ" ಅಥವಾ
   - ಆಧಾರ್ ಗುರುತಿನ ಚೀಟಿ ಅಥವಾ
   - ರೇಷನ್ ಕಾರ್ಡ್.
3. ಕರ್ನಾಟಕ ರಾಜ್ಯದಿಂದ ಕಾಶಿ ಯಾತ್ರೆ ಕೈಗೊಳ್ಳುವ ಯಾತ್ರಾರ್ಥಿಗಳು ಆಯಾ ಆರ್ಥಿಕ ವರ್ಷದ ಮೊದಲ ದಿನಕ್ಕೆ ಅನ್ವಯಿಸುವಂತೆ ಏಪ್ರಿಲ್ 1ಕ್ಕೆ 18 ವರ್ಷಗಳ ಮೇಲ್ಪಟ್ಟವರಾಗಿರತಕ್ಕದ್ದು. 18 ವಯಸ್ಸಿನ ಕೆಳಗಿನವರ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. 18 ವರ್ಷ ಮೇಲ್ಪಟ್ಟ ಯಾತ್ರಾರ್ಥಿಗಳು ವಯಸ್ಸಿಗೆ ಸಂಬಂಧಿಸಿದ ಸೂಕ್ತ ದಾಖಲೆಯನ್ನು ಹಾಜರುಪಡಿಸುವುದು.
4. ದಿನಾಂಕ:01-04-2022 ರಿಂದ ದಿನಾಂಕ:30-06-2022ರವರೆಗೆ ಕಾಶಿ ಶ್ರೀ ವಿಶ್ವನಾಥ ಸ್ವಾಮಿಯ ದರ್ಶನಕ್ಕೆ ತೆರಳಿದ ಯಾತ್ರಾರ್ಥಿಗಳು ಸಂಬಂಧಿಸಿದ ದಾಖಲಾತಿ (ಕಾಶಿ ಶ್ರೀ ವಿಶ್ವನಾಥ ಸ್ವಾಮಿ ದೇವಾಲಯಕ್ಕೆ ತೆರಳಲು ಮುಂಗಡವಾಗಿ ಕಾಯ್ದಿರಿಸಿದ ಮತ್ತು ಹಿಂದಿರುಗಿದ ಬಗ್ಗೆ ಕಾಯ್ದಿರಿಸಿದ ಟಿಕೇಟ್, ಛಾಯಾಚಿತ್ರ, ಪೂಜಾ ರಶೀದಿ ಅಥವಾ ದೇವಾಲಯಕ್ಕೆ ತೆರಳಿ/ಮರಳಿದ ಬಗ್ಗೆ ಯಾವುದಾದರೂ ಇತರೆ ದಾಖಲೆ)ಗಳನ್ನು ಮುದ್ದಾಂ ಆಗಿ ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ಇವರ ಕಛೇರಿಗೆ ಸಲ್ಲಿಸತಕ್ಕದ್ದು.
5. ದಿನಾಂಕ:01.07.2022 ರಿಂದ ಅನ್ವಯವಾಗುವಂತೆ ಯಾತ್ರಾರ್ಥಿಗಳು ಕಾಶಿ ಯಾತ್ರೆ ಕೈಗೊಂಡಿರುವ ಬಗ್ಗೆ, ಸಂಬಂಧಿಸಿದ ದಾಖಲೆಗಳನ್ನು ವ್ಯವಸ್ಥಾಪಕರು, ಕರ್ನಾಟಕ ರಾಜ್ಯ ಛತ್ರ, ವಾರಣಾಸಿ ಇವರ ಕಛೇರಿಯಿಂದ ಬಯೋಮೆಟ್ರಿಕ್ ದೃಢೀಕರಣದೊಂದಿಗೆ, ಆನ್‌ಲೈನ್ ಅಥವಾ ಮುದ್ದಾಂ/ನೊಂದಾಯಿತ ಅಂಚೆ ಮೂಲಕ ಆಯುಕ್ತರು ಧಾರ್ಮಿಕ ದತ್ತಿ ಇಲಾಖೆ ಇವರ ಕಛೇರಿಗೆ ಸಲ್ಲಿಸತಕ್ಕದ್ದು. ಒಂದು ವೇಳೆ ವ್ಯವಸ್ಥಾಪಕರು, ಕರ್ನಾಟಕ ರಾಜ್ಯ ಛತ್ರ, ವಾರಣಾಸಿ ಇವರ ದೃಢೀಕರಣ ಇಲ್ಲದಿದ್ದಲ್ಲಿ ಅಂತಹ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
6. ಯಾತ್ರಾರ್ಥಿಗಳು ಸಹಾಯಧನವನ್ನು ಒಂದು ಬಾರಿ ಪಡೆದ ನಂತರದಲ್ಲಿ, ಅದೇ ವ್ಯಕ್ತಿಗೆ ಎರಡನೇ ಬಾರಿ ಅನುದಾನ ನೀಡಲು ಪರಿಗಣಿಸಲಾಗುವುದಿಲ್ಲ.

.....2

Scanned with CamScanner

7. ಸರ್ಕಾರದ ಸಹಾಯಧನಕ್ಕಾಗಿ ಅರ್ಜಿ ಸಲ್ಲಿಸುವ ಯಾತ್ರಾರ್ಥಿಗಳ ಬ್ಯಾಂಕ್ ಖಾತೆಯು ರಾಷ್ಟ್ರೀಕೃತ ಬ್ಯಾಂಕಿನ ಖಾತೆಯಾಗಿರಬೇಕು ಮತ್ತು ಕಡ್ಡಾಯವಾಗಿ ಆಧಾರ್ ಲಿಂಕ್ ಆಗಿರತಕ್ಕದ್ದು.
8. ಕರ್ನಾಟಕ ರಾಜ್ಯದಿಂದ ಕಾಶಿ ಯಾತ್ರೆ ಕೈಗೊಂಡ 30000 ಯಾತ್ರಾರ್ಥಿಗಳಿಗೆ ತಲಾ ರೂ.5,000/- (ಐದು ಸಾವಿರ ಮಾತ್ರ) ಗಳಂತೆ ಧನ ಸಹಾಯವನ್ನು ನೀಡಲಾಗುವುದು.

9. ಕರ್ನಾಟಕದ ಖಾಯಂ ನಿವಾಸಿಗಳು ಮಾತ್ರ ಈ ಧನ ಸಹಾಯವನ್ನು ಪಡೆಯಲು ಅರ್ಹರಾಗಿರುತ್ತಾರೆ. ಈ ಉದ್ದೇಶಕ್ಕಾಗಿ ಚುನಾವಣಾ ಗುರುತಿನ ಚೀಟಿ ಹಾಗೂ ಆಧಾರ್ ಕಾರ್ಡ್‌ನ್ನು ಅಪ್‌ಲೋಡ್ ಮಾಡತಕ್ಕದ್ದು.

10. 18 ವರ್ಷ ಮೇಲ್ಪಟ್ಟ ಯಾತ್ರಾರ್ಥಿಗಳು ಮಾತ್ರ ಈ ಯೋಜನೆಯಡಿ ಸಹಾಯಧನವನ್ನು ಪಡೆಯಲು ಅರ್ಹರಾಗಿರುತ್ತಾರೆ. 18 ವರ್ಷ ಮೇಲ್ಪಟ್ಟಿರುವ ಯಾತ್ರಾರ್ಥಿಗಳು ವಯಸ್ಸಿಗೆ ಸಂಬಂಧಿಸಿದ ಸೂಕ್ತ ದಾಖಲೆಯನ್ನು ಅಪ್‌ಲೋಡ್ ಮಾಡುವುದು.

11. ಯಾತ್ರಾರ್ಥಿಗಳು ಸಹಾಯಧನವನ್ನು ಒಂದು ಬಾರಿ ಪಡೆದ ನಂತರದಲ್ಲಿ ಅದೇ ವ್ಯಕ್ತಿಗೆ ಮತ್ತೊಮ್ಮೆ ಅನುದಾನ ನೀಡಲಾಗುವುದಿಲ್ಲ. ಈ ಬಗ್ಗೆ ಯಾತ್ರಾರ್ಥಿಗಳು ರೂ.20/-ಗಳ ಛಾಪಾ ಕಾಗದದಲ್ಲಿ (E-Stamp Paper) ಈ ಹಿಂದೆ ಸಹಾಯಧನವನ್ನು ಪಡೆದಿಲ್ಲವೆಂದು ಸ್ವಯಂದೃಢೀಕರಿಸಿ ನೋಟರಿ ಮೊಹರು ಮತ್ತು ಸಹಿಯೊಂದಿಗೆ ದೃಢೀಕರಣವನ್ನು ಅಪ್‌ಲೋಡ್ ಮಾಡತಕ್ಕದ್ದು.

12. ಕಾಶಿ ಯಾತ್ರೆಯನ್ನು ಕೈಗೊಂಡ ಯಾತ್ರಾರ್ಥಿಗಳು ಸರ್ಕಾರದ ಸಹಾಯಧನವನ್ನು ಪಡೆಯಲು ಇಚ್ಛಿಸಿದಲ್ಲಿ, ಆಯಾ ಆರ್ಥಿಕ ಸಾಲಿನಲ್ಲಿ, ಆಯುಕ್ತರು ಧಾರ್ಮಿಕ ದತ್ತಿ ಇಲಾಖೆ ಇವರು ನಿಗಧಿಪಡಿಸಲಾಗುವ ದಿನಾಂಕಗಳ ಒಳಗೆ ಅಗತ್ಯ ದಾಖಲೆಗಳೊಂದಿಗೆ **ರೂ.25/-ಗಳ ಅರ್ಜಿ ಶುಲ್ಕ ಪಾವತಿಸಿ ಸಂಬಂಧಿಸಿದ ವೆಬ್‌ಸೈಟ್ ಅಥವಾ ಮೊಬೈಲ್ ಆಪ್ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು.** ನಿಗಧಿಪಡಿಸಿದ ಅವಧಿ ಪೂರ್ಣಗೊಂಡ ನಂತರ ಸಲ್ಲಿಸಲಾಗುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಸದರಿ ಸಹಾಯಧನವನ್ನು ಆಯಾ ಆರ್ಥಿಕ ಸಾಲಿನಲ್ಲಿ ಯಾತ್ರೆ ಕೈಗೊಂಡ ಯಾತ್ರಾರ್ಥಿಗಳಿಗೆ ಮಾತ್ರ ಮಂಜೂರು ಮಾಡಲಾಗುವುದು.

13. ನಿಗಧಿತ ಅವಧಿಯಲ್ಲಿ ಸ್ವೀಕರಿಸಿದ ಎಲ್ಲಾ ಅರ್ಜಿಗಳನ್ನು ಪರಿಶೀಲಿಸಿ ಅರ್ಹ ಅರ್ಜಿದಾರರನ್ನು ಆಯ್ಕೆ ಮಾಡಿ ಸಹಾಯಧನವನ್ನು ಡಿ.ಬಿ.ಟಿ (DBT) ಮೂಲಕ ಯಾತ್ರಾರ್ಥಿಗಳ ಬ್ಯಾಂಕ್ ಖಾತೆಗೆ ನೇರವಾಗಿ ಜಮಾ ಮಾಡಲಾಗುವುದು. ಈ ಬಗ್ಗೆ ಯಾತ್ರಾರ್ಥಿಗಳು ಕಡ್ಡಾಯವಾಗಿ ತಮ್ಮ ಆಧಾರ್‌ನ್ನು ಬ್ಯಾಂಕ್ ಖಾತೆಗೆ ಲಿಂಕ್ ಮಾಡಿರತಕ್ಕದ್ದು ಹಾಗೂ ಖಾತೆಯನ್ನು ಚಾಲ್ತಿಯಲ್ಲಿಟ್ಟುಕೊಳ್ಳತಕ್ಕದ್ದು.

14. ಯಾತ್ರಾರ್ಥಿಗಳು ಕಾಶಿ ಯಾತ್ರೆಗೆ ತೆರಳುವ ಮುನ್ನ ಕೆಳಕಂಡಂತೆ ಸಂಬಂಧಿಸಿದ ವೆಬ್‌ಸೈಟ್ ಅಥವಾ ಮೊಬೈಲ್ ಆಪ್ ಮೂಲಕ ಆನ್‌ಲೈನ್ ಅಪ್ಲಿಕೇಶನ್ ಪ್ರಕ್ರಿಯೆಯ 1 ಮತ್ತು 2 ಹಂತಗಳನ್ನು ಪೂರೈಸಬೇಕಾಗಿರುತ್ತದೆ ಹಾಗೂ ವಾರಣಾಸಿಗೆ ತೆರಳಿದ ನಂತರ 3ನೇ ಹಂತವನ್ನು ಪೂರ್ಣಗೊಳಿಸಬೇಕಾಗಿರುತ್ತದೆ.

- ಅರ್ಜಿಯ ಹಂತ 1 ರಲ್ಲಿ ಯಾತ್ರಾರ್ಥಿಯು ತಮ್ಮ ಗುರುತಿನ ವಿವರಗಳನ್ನು ಭರ್ತಿ ಮಾಡುವುದು.
- ಅರ್ಜಿಯ ಹಂತ 2 ರಲ್ಲಿ ಅಗತ್ಯವಿರುವ ದಾಖಲೆಗಳನ್ನು ಅಪ್‌ಲೋಡ್ ಮಾಡುವುದು.

.....3

Scanned with CamScanner

-3-

- ಯಾತ್ರಾರ್ಥಿಗಳು (ಕಾಶಿ/ವಾರಾಣಸಿ) ತಲುಪಿದ ನಂತರ ಅರ್ಜಿಯ 3ನೇ ಹಂತದಲ್ಲಿ ಯಾತ್ರಾರ್ಥಿಯು ಜಿಯೋಲೊಕೇಶನ್ (Geo Location) ಮಾಹಿತಿಯನ್ನು ಪೂರ್ಣಗೊಳಿಸತಕ್ಕದ್ದು.
- **ಸೆಲ್ಫಿ ಒಳಗೊಂಡಿರುವ ಫೋಟೋವನ್ನು ಅಪ್‌ಲೋಡ್** ಮಾಡುವ ಮೂಲಕ ಯಾತ್ರಾ ಸ್ಥಳದಲ್ಲಿ ನಿಮ್ಮ ಉಪಸ್ಥಿತಿಯನ್ನು ಖಚಿತಪಡಿಸಿ ಮತ್ತು ಫೋಟೋದ ಹಿನ್ನಲೆಯಲ್ಲಿ ದೇವಾಲಯದ ಪ್ರಮುಖ ಸ್ಥಳವನ್ನು ಕಾಣುವಂತೆ ಅಪ್‌ಲೋಡ್ ಮಾಡಬೇಕು. (ದೇವಾಲಯದ 5 ಕಿಲೋ ಮೀಟರ್ ಒಳಗೆ)

15. ಸರ್ಕಾರದಿಂದ ಮಂಜೂರು ಮಾಡಿರುವ ಅನುದಾನ ಲಭ್ಯತೆಗನುಗುಣವಾಗಿ ಯಾತ್ರಾರ್ಥಿಗಳಿಗೆ ಸಹಾಯಧನವನ್ನು ನೀಡಲಾಗುವುದರಿಂದ ಮೊದಲು ಅರ್ಜಿ ಸಲ್ಲಿಸಿದ ಯಾತ್ರಾರ್ಥಿಗಳಿಗೆ ಆದ್ಯತೆ ನೀಡತಕ್ಕದ್ದು.

16. ಯಾತ್ರಾರ್ಥಿಗಳ ಅನುಕೂಲಕ್ಕಾಗಿ ಮಾರ್ಗಸೂಚಿಯನ್ನು ಇಲಾಖೆಯ ಅಧಿಕೃತ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.

(ಕೆ.ಪಿ ಹೇಮಂತರಾಜು)
ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ (ಧಾರ್ಮಿಕ ದತ್ತಿ)

Scanned with CamScanner

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- 2023-24ನೇ ಸಾಲಿನ ಆಯವ್ಯಯದಲ್ಲಿ ಧಾರ್ಮಿಕ ದತ್ತಿ ಇಲಾಖೆಯ ಅಧಿಕಾರಿ/ನೌಕರರ ವೇತನ, ಇತರೆ ಭತ್ಯೆ ಹಾಗೂ ವಿವಿಧ ಯೋಜನೆಗಳಿಗೆ ಅನುದಾನ ಬಿಡುಗಡೆಗೊಳಿಸುವ ಕುರಿತು.

ಧಾರ್ಮಿಕ ದತ್ತಿ ಇಲಾಖೆ ... ಸ್ವೀಕರಿಸಲಾಗಿದೆ
21 JUN 2023

ಓದಲಾಗಿದೆ:- 1) ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ರವರ ಪತ್ರ ಸಂಖ್ಯೆ: ಎಟಿ 3/ ಸಿಆರ್ / 01/ 2023-24 ದಿನಾಂಕ:05.04.2023.
2) ಸರ್ಕಾರದ ಆದೇಶ ಸಂಖ್ಯೆ: ಕಂಇ 157 ಮುಆಬಿ 2023 ದಿನಾಂಕ: 13-04-2023
3) ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ರವರ ಪತ್ರ ಸಂಖ್ಯೆ: ಎಟಿ 3/ ಸಿಆರ್ / 01/ 2023-24 ದಿನಾಂಕ:01.06.2023.

Pls act.
Accts Supdt

* * * * *

ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ರವರ ಪ್ರಸ್ತಾವನೆಯಲ್ಲಿ, 2023-24ನೇ ಸಾಲಿನ ಆಯವ್ಯಯದಲ್ಲಿ, ವೇತನ, ಇತರೇ ಭತ್ಯೆಗಳು ಮತ್ತು ಕಛೇರಿಯ ಉಪಯೋಗಕ್ಕಾಗಿ ವಿವಿಧ ಲೆಕ್ಕ ಶೀರ್ಷಿಕೆಗಳಡಿಯಲ್ಲಿ ಹಾಗೂ ಯೋಜನೆಗಳ ಲೆಕ್ಕ ಶೀರ್ಷಿಕೆಗಳಡಿಯಲ್ಲಿ ಧಾರ್ಮಿಕ ದತ್ತಿ ಇಲಾಖೆಗೆ ಸರ್ಕಾರವು ಅನುದಾನವನ್ನು ಒದಗಿಸಿರುತ್ತದೆ.

ಆದ್ದರಿಂದ, 2023-24ನೇ ಸಾಲಿಗೆ ಇಲಾಖೆಯ ಅಧಿಕಾರಿ/ ನೌಕರರ ವೇತನ, ಇತರೇ ಭತ್ಯೆಗಳು ಮತ್ತು ಕಛೇರಿಯ ಉಪಯೋಗಕ್ಕಾಗಿ ವಿವಿಧ ಲೆಕ್ಕ ಶೀರ್ಷಿಕೆಗಳಡಿಯಲ್ಲಿ ಹಾಗೂ ಯೋಜನೆಗಳ ಲೆಕ್ಕ ಶೀರ್ಷಿಕೆಗಳಡಿಯಲ್ಲಿ ಆರ್ಥಿಕ ಇಲಾಖೆಯು ಒದಗಿಸಿರುವ ಅನುದಾನದ ಹಂಚಿಕೆ ಹಾಗೂ ಸರ್ಕಾರದಿಂದ ಬಿಡುಗಡೆ ಮಾಡಬೇಕಾಗಿರುವ ಮೊದಲ ಕಂತಿನ ಅನುದಾನವನ್ನು ಬಿಡುಗಡೆ ಮಾಡುವಂತೆ ಕೋರಿರುತ್ತಾರೆ. ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ರವರ ಪ್ರಸ್ತಾವನೆಯನ್ವಯ ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿನ ಸರ್ಕಾರದ ಆದೇಶದಲ್ಲಿ, 2023-24ನೇ ಸಾಲಿಗೆ ಇಲಾಖೆಯ ಅಧಿಕಾರಿ/ ನೌಕರರ ವೇತನ, ಇತರೇ ಭತ್ಯೆಗಳು ಮತ್ತು ಕಛೇರಿಯ ಉಪಯೋಗಕ್ಕಾಗಿ ವಿವಿಧ ಲೆಕ್ಕ ಶೀರ್ಷಿಕೆಗಳಡಿ ಆರ್ಥಿಕ ಇಲಾಖೆಯು ಒದಗಿಸಿರುವ ಅನುದಾನದನ್ವಯ ಇಲಾಖಾ ಕಾರ್ಯದರ್ಶಿಗಳಿಗಿರುವ ಅಧಿಕಾರ ಪ್ರತ್ಯಾಯೋಜನೆಯನ್ವಯ ಆದೇಶ ಹೊರಡಿಸಲಾಗಿರುತ್ತದೆ.

ಆದರೆ, 2023-24ನೇ ಸಾಲಿಗೆ ಇಲಾಖೆಯ ವಿವಿಧ ಯೋಜನೆಗಳ ಲೆಕ್ಕ ಶೀರ್ಷಿಕೆಗಳಡಿ ಆಯವ್ಯಯ ಹಂಚಿಕೆಯಲ್ಲಿ ಒಟ್ಟು ರೂ.3250.00 ಲಕ್ಷಗಳ ಅನುದಾನವನ್ನು ಆರ್ಥಿಕ ಇಲಾಖೆಯು ಒದಗಿಸಿದ್ದು, ಇದರಲ್ಲಿ ಮೊದಲ ಕಂತಿನ ಅನುದಾನ ರೂ.1083.27 ಲಕ್ಷಗಳನ್ನು ಬಿಡುಗಡೆ ಮಾಡಬೇಕಾಗಿರುತ್ತದೆ ಹಾಗೂ ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ರವರ ಪತ್ರದಲ್ಲಿ ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ: ಆಇ 15 ಬಿಪಿಎ 2023 ದಿನಾಂಕ:20-04-2023ರನ್ವಯ ಮಧ್ಯಂತರ ಪರಿಹಾರ ಭತ್ಯೆಯನ್ನು ಲೆಕ್ಕ ಶೀರ್ಷಿಕೆ: 2250-00-102-4-00 (014 ) ಇತರೆ ಭತ್ಯೆಗಳು ಇದರಡಿಯಲ್ಲಿ ರೂ.157.86 ಲಕ್ಷಗಳ ಅನುದಾನ ಒದಗಿಸಿದ್ದು, ಇದರಲ್ಲಿ ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿನ ಸರ್ಕಾರದ ಆದೇಶದಲ್ಲಿ ಈಗಾಗಲೇ ರೂ.39.00 ಲಕ್ಷಗಳ ಅನುದಾನ ಬಿಡುಗಡೆ ಮಾಡಿದ್ದು, ಮೇಲಿನ ಲೆಕ್ಕ ಶೀರ್ಷಿಕೆಯಡಿ ಬಾಕಿ ಇರುವ ರೂ.13.62 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

. . . . 2



Generated from eOffice by PAVAN KUMAR M, HRICE-ACC-FDA(PM), FIRST DIVISION ASSISTANT, HRICE on 19/03/2024 03:04 PM

ಆದ್ದರಿಂದ, ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ರವರ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕಂಇ 157 ಮುಅಬಿ 2023 (ಭಾಗ-1)**
**ಬೆಂಗಳೂರು; ದಿನಾಂಕ:19-06-2023**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, 2023-24ನೇ ಸಾಲಿಗೆ ಇಲಾಖೆಯ ವಿವಿಧ ಯೋಜನೆಗಳಿಗೆ ಹಾಗೂ ಇಲಾಖೆಯ ಅಧಿಕಾರಿ/ನೌಕರರ ವೇತನಕ್ಕೆ ಸಂಬಂಧಿಸಿದಂತೆ ಕೆಳಕಂಡ ಕೋಷ್ಟಕದಲ್ಲಿರುವಂತೆ ವಿವಿಧ ಲೆಕ್ಕ ಶೀರ್ಷಿಕೆಗಳಡಿ ಮೊದಲನೇ ಕಂತಿನ ಅನುದಾನ ರೂ.1096.89 ಲಕ್ಷಗಳ ಅನುದಾನವನ್ನು ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ಇವರಿಗೆ ಬಿಡುಗಡೆ ಮಾಡಲಾಗಿದೆ.

| ಕ್ರ. ಸಂ. | ಯೋಜನೆಗಳು ಮತ್ತು ಲೆಕ್ಕ ಶೀರ್ಷಿಕೆಗಳ ವಿವರ | 2023-24 ನೇ ಸಾಲಿನ ಆಯವ್ಯಯ ಹಂಚಿಕೆ (ರೂ.ಲಕ್ಷಗಳಲ್ಲಿ) | ಸರ್ಕಾರದಿಂದ ಬಿಡುಗಡೆ ಮಾಡಲಾಗಿರುವ ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|---|
| 1 | 2250-00-103-5-09 | | |
| | ಆರಾಧನ ಇತರೇ ಖರ್ಚು (059) | 500.00 | 166.66 |
| | ಪರಿಶಿಷ್ಟ ಜಾತಿ ಉಪ ಯೋಜನೆ(422) | 500.00 | 166.66 |
| | ಗಿರಿಜನ ಉಪಯೋಜನೆ (423) | 120.00 | 40.00 |
| 2 | 2250-00-103-5-08 (100)<br>ಮಾನಸ ಸರೋವರ ಭಕ್ತಾದಿಗಳಿಗೆ ಧನ ಸಹಾಯ/ಪರಿಹಾರ | 2000.00 | 666.66 |
| 3 | 2250-00-103-5-06 (103)<br>ಯಡಿಯೂರು ಅಭಿವೃದ್ಧಿ ಸಹಾಯಾನುದಾನ ಸಾಮಾನ್ಯ | 5.00 | 1.66 |
| 4 | 2250-00-102-4-03 (103)<br>ಶ್ರವಣ ಬೆಳಗೊಳದ ಪ್ರಾಕೃತ ಅಧ್ಯಯನ ಮತ್ತು ಸಂಶೋಧನ ಸಂಸ್ಥೆಗೆ ವಿಶೇಷಾನುದಾನ ಸಹಾಯಾನುದಾನ - ಸಾಮಾನ್ಯ | 25.00 | 8.3 |
| 5 | 2250-00-103-5-15 (200)<br>ಕರ್ನಾಟಕ ರಾಜ್ಯ ಛತ್ರ ತಿರುಮಲ, ತಿರುಪತಿ ನಿರ್ವಹಣಾ ವೆಚ್ಚ | 100.00 | 33.33 |
| 6 | 2250-00-102-4-00 (014)<br>ವೇತನ ಇತರೆ ಭತ್ಯೆಗಳು | 157.86 | 13.62 |
| | ಒಟ್ಟು | 3407.86 | 1096.89 |

....3



Scanned with CamScanner

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 02 ಟಿಎಫ್‌ಪಿ 2023 ದಿನಾಂಕ: 01-04-2023ರ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
(ಕೆ.ಪಿ ಹೇಮಂತರಾಜು)
ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ (ಧಾರ್ಮಿಕ ದತ್ತಿ)

ಇವರಿಗೆ:

1. ಮಹಾಲೇಖಪಾಲರು, (ಲೆಕ್ಕ ಪತ್ರ ಮತ್ತು ಲೆಕ್ಕ ಪರಿಶೋಧನ) ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ, ಬೆಂಗಳೂರು.

ಪ್ರತಿ:-

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
2. ಸರ್ಕಾರದ ಜಂಟಿ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವೆಚ್ಚ-7, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿ, ಕಂದಾಯ ಇಲಾಖೆ (ಧಾರ್ಮಿಕ ದತ್ತಿ, ಭೂಮಿ & ಯು.ಪಿ.ಓ.ಆರ್) ಇವರ ಆಪ್ತ ಸಹಾಯಕರು.
4. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.